ಸಂಪುಟ: ೦೭/ ಸಂಚಿಕೆ: ೧೮೫/ ಶುಕ್ರವಾರ ದಿನಾಂಕ : ೧೨-೦೯-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ಧಾರವಾಡ ಬಾಗಲಕೋಟ ವಿಜಯಪುರ ಗದಗ ಕೊಪ್ಪಳ ಹಾವೇರಿ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 185/ FRIDAY Date : 12-09-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

ಬೆಳೆ ನಷ್ಟ ಸಮೀಕ್ಷೆ ನಡೆಸಿ ಪರಿಹಾರ ಬಿಡುಗಡೆ ಮಾಡಿ

ಹಾವೇರಿ: ರಾಜ್ಯ ಸರ್ಕಾರವು ಭಾರೀ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಲ್ಲಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬೆಳೆ ನಷ್ಟ ಸಮೀಕ್ಷೆಗಳನ್ನು ನಡೆಸಿ ರೈತರಿಗೆ ಮಧ್ಯಂತರ ಪರಿಹಾರವನ್ನು ನೀಡಬೇಕು ಎಂದು ಸಂಸದ ಮತ್ತು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಒತ್ತಾಯಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಬೊಮ್ಮಾಯಿ, ಬೆಳೆ ನಷ್ಟದ ಕುರಿತು ವಿವರವಾದ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಬಹುದು. ಓಆಖಿಈ ಮತ್ತು ಖಆಖಿಈ ಮಾನದಂಡಗಳ ಅಡಿಯಲ್ಲಿ ಪರಿಹಾರವನ್ನು ನೀಡಬೇಕು ಎಂದು ಹೇಳಿದರು. ಕಳೆದ ಎರಡು ವರ್ಷ ವಾಡಿಗೆಗಿಂತ ಹೆಚ್ಚು ಮಳೆ ಆಗಿದೆ. ರೈತರ ಬೆಳೆ ನಷ್ಟ ವಾಗಿದೆ, ಬಡವರ ಮನೆ ಬಿದ್ದಿವೆ. ಇಷ್ಟೆಲ್ಲಾ ಆದರೂ ಸರ್ಕಾರ ಕಣ್ಣು ಮುಚ್ಚಿಕೊಂಡು ಕೂತಿದೆ ಎಂದರು. ಮೊನ್ನೆ ಕಾಟಾಚಾರಕ್ಕೆ ಒಂದು ಸಭೆ ಬಿಟ್ಟರೆ ಸಿಎಂ ಸಿದ್ದರಾಮಯ್ಯ ಏನೂ ಮಾಡಿಲ್ಲ. ಬೆಳೆ ನಷ್ಟದ ವ್ಯಾಪ್ತಿ, ಕ್ಷೇತ್ರದ ಬಗ್ಗೆ ಪ್ರಾಥಮಿಕ ಸಮೀಕ್ಷೆ ಸರಿಯಾಗಿ ಮಾಡೇ ಇಲ್ಲ. ಗ್ರಾ.ಪಂ ಮಟ್ಟದಲ್ಲಿ ವಿಲೇಜ್ ಅಕೌಂಟೆಂಟ್ ಸರ್ವೆ ಮಾಡಬೇಕು. ಅರ್ಜಿ ಕೊಟ್ಟಲ್ಲಿ ಮಾತ್ರ ಸರ್ವೆ ಮಾಡಿದ್ದಾರೆ, ವೈಜ್ಞಾನಿಕವಾಗಿ ಬೆಳೆಹಾನಿ ಸರ್ವೆ ಆಗೇ ಇಲ್ಲ ಎಂದರು. ಹಾವೇರಿ ಜಿಲ್ಲೆಯಲ್ಲಿ 23,536 ಹೆಕ್ಟೇರ್ ಪ್ರದೇಶ ಹಾವೇರಿ ಜಿಲ್ಲೆಯಲ್ಲಿ ನಷ್ಟವಾಗಿದೆ. ಇದಕ್ಕಿಂತ ವ್ಯಾಪಕವಾಗಿ ನಷ್ಟವಾಗಿದೆ. ಕೃಷಿ ಇಲಾಖೆ ರೈತರ ಸಮಸ್ಯೆಗಳಿಗೆ ಸ್ಪಂದಿಸ್ತಿಲ್ಲ. ಮನೆ ಬಿದ್ದ ಬಗ್ಗೆ ಸರ್ಕಾರ ಚಕಾರ ಎತ್ತುತ್ತಿಲ್ಲ. ನಮ್ಮ ಸರ್ಕಾರ ಮನೆ ಬಿದ್ದರೆ 5ಲಕ್ಷ ಕೊಡ್ತಾ ಇತ್ತು.

ಕೃಷ್ಣಾ ಮೇಲ್ದಂಡೆ ಯೋಜನೆ ಭೂಸ್ವಾಧೀನ ಪರಿಹಾರ ವಿಶೇಷ ಸಂಪುಟ ಸಭೆಯಲ್ಲಿ ತೀರ್ಮಾನ

ಬೆಂಗಳೂರು: ಕೃಷ್ಣಾ ಮೇಲ್ದಂಡೆ ಯೋಜನೆ 3ನೇ ಹಂತದ ಕಾಮಗಾರಿಗಳಿಗಾಗಿ ಅವಶ್ಯವಿರುವ ಜಮೀನಿಗೆ ಪರಿಹಾರ ನೀಡಲು ಮತ್ತು ಭೂಸ್ವಾಧೀನ ಸಂಬಂಧ ಅಂತಿಮ ನಿರ್ಣಯ ಕೈಗೊಳ್ಳಲು ಸೆ.16ರಂದು ವಿಶೇಷ ಸಚಿವ ಸಂಪುಟ ಸಭೆ ನಡೆಸಲು ತೀರ್ಮಾನಿಸಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ್ ತಿಳಿಸಿದರು.

ಗುರುವಾರ ಸಚಿವ ಸಂಪುಟ ಸಭೆ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನಡೆದ ಸಚಿವ ಸಂಪುಟ ಸಭೆಯಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ-3ರ ಭೂಸ್ವಾಧೀನ ಪ್ರಕ್ರಿಯೆಯನ್ನು ಒಂದೇ ಹಂತದಲ್ಲಿ ತ್ವರಿತವಾಗಿ ಕೈಗೊಳ್ಳುವ ಕುರಿತಂತೆ ಒಪ್ಪಂದದ ಐತೀರ್ಪು ರಚಿಸಲು, ಏಕರೂಪದ ದರ ನಿಗದಿಪಡಿಸಲು ಹಾಗೂ ಇನ್ನಿತರ ಆಡಳಿತಾತ್ಮಕ ವಿಷಯಗಳಿಗೆ ಅನುಮೋದನೆ ನೀಡುವ ಕುರಿತು ವಿಸ್ತೃತವಾದ ಹಾಗೂ ಸಕಾರಾತ್ಮಕ ಚರ್ಚೆ ನಡೆದಿದೆ ಎಂದು ತಿಳಿಸಿದರು.

ಕೃಷ್ಣಾ ಮೇಲ್ದಂಡೆ ಯೋಜನೆ 3 ಅನುಷ್ಠಾನ ಸಂಬಂಧ ರಾಜ್ಯ ಸರ್ಕಾರ ಬದ್ಧತೆ ತೋರಿದೆ. ಅದನ್ನು ಪೂರ್ಣಗೊಳಿಸುವ ಸಂಬಂಧ ಸಿಎಂ ತಮ್ಮ ಸ್ಪಷ್ಟ ನಿಲುವು ತಿಳಿಸಿದ್ದಾರೆ. ಸಿಎಂ ಆ ಭಾಗದ ಮುಖಂಡರು, ರೈತರನ್ನು ಕರೆದು ಹಲವು ಬಾರಿ ಸಭೆ ಮಾಡಿದ್ದಾರೆ. ಬಹಳಷ್ಟು ಪ್ರಮಾಣದ ಕೇಸ್ ಕೋರ್ಟ್‌ನಲ್ಲಿದೆ. ಈ ಯೋಜನೆಗೆ ಮುಳುಗಡೆಯಾಗುವ ಭೂಮಿ 75,000 ಎಕರೆ. ಈ ಯೋಜನೆಯನ್ನು ಪೂರ್ಣ ಮಾಡಲು ರೈತರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕಾಗಿದೆ. ಭೂಮಿ ಸ್ವಾಧೀನ ಪಡಿಸಲು ಅನೇಕ ಪ್ರಕ್ರಿಯೆಗಳಿವೆ ಎಂದರು.

ಈ ಸಂಬಂಧ ತಾಂತ್ರಿಕ ಹಾಗೂ ಕಾನೂನಾತ್ಮಕ ವಿಷಯಗಳ ಬಗ್ಗೆ ತೀರ್ಮಾನ ಕೈಗೊಳ್ಳಬೇಕಾಗಿದೆ. ಈ ಹಿನ್ನೆಲೆ ಇಂದು ಸಚಿವ ಸಂಪುಟ ಹಲವು ಅಂಶಗಳ ಬಗ್ಗೆ ಚರ್ಚೆ ಮಾಡಿದೆ. ರೈತ ಮುಖಂಡರ ಅಭಿಪ್ರಾಯಗಳನ್ನು ಸಂಪುಟ ಸಭೆಯಲ್ಲಿ ಚರ್ಚಿಸಿದ್ದು, ಆದರೆ ಚರ್ಚೆ ಅಪೂರ್ಣವಾಗಿದೆ. ಸೆ.16ರಂದು ಈ ವಿಚಾರವಾಗಿ ಸಚಿವ ಸಂಪುಟದ ವಿಶೇಷ ಸಭೆಯನ್ನು ಕರೆದು, ತೀರ್ಮಾನ ತೆಗೆದುಕೊಳ್ಳಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ -3ರಲ್ಲಿ ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣಾ ಮಟ್ಟವನ್ನು 519 ಮೀಟರ್‌ನಿಂದ 524 ಮೀಟರ್‌ಗೆ ಎತ್ತರಿಸುವುದರಿಂದ ಹೆಚ್ಚುವರಿಯಾಗಿ 100 ಟಿಎಂಸಿ ನೀರಿನ ಪ್ರಮಾಣ ಸಂಗ್ರಹ ಅಂದಾಜಿಸಲಾಗಿದೆ. ಯೋಜನೆ ಅನುಷ್ಠಾನಕ್ಕೆ ಒಟ್ಟು 1,33,867 ಎಕರೆ ಜಮೀನು ಭೂಸ್ವಾಧೀನ ಅಗತ್ಯವಿದ್ದು, ಇದರಲ್ಲಿ 75,563 ಎಕರೆ ಹಿನ್ನೀರಿನಲ್ಲಿ ಮುಳುಗಡೆಯಾಗುವ ಜಮೀನು ಸೇರಿದೆ. ಇದುವರೆಗೆ 29,566 ಎಕರೆಗೆ ಭೂಸ್ವಾಧೀನ ಐತೀರ್ಪು ಹೊರಡಿಸಲಾಗಿದೆ.

59,354 ಎಕರೆ ಜಮೀನು ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಬೇಕಿದೆ. ಮುಳುಗಡೆ ಹೊಂದಲಿರುವ ಜಮೀನನ್ನು 2ಹಂತದಲ್ಲಿ ಭೂಸ್ವಾಧೀನಕ್ಕೆ ಒಳಪಡಿಸುವ ಬದಲು ಒಂದೇ ಹಂತದಲ್ಲಿ ಭೂಸ್ವಾಧೀನಪಡಿಸಲು ಈಗಾಗಲೇ ತೀರ್ಮಾನಿಸಲಾಗಿದೆ. ಯೋಜನೆ ಅನುಷ್ಠಾನಕ್ಕೆ ಆರಂಭದಲ್ಲಿ 51,148 ಕೋಟಿ ಯೋಜನಾ ಮೊತ್ತ ಅಂದಾಜಿಸಲಾಗಿತ್ತು.

ಈಗ ಪರಿಷ್ಕೃತ 87,818 ಕೋಟಿ ಅಂದಾಜಿಸಲಾಗಿದೆ. ಇದರಲ್ಲಿ ಭೂಸ್ವಾಧೀನ ಪ್ರಕ್ರಿಯೆಗೆ 17,627 ಕೋಟಿ ಆರಂಭದಲ್ಲಿ ಅಂದಾಜಿಸಲಾಗಿತ್ತು. ಪ್ರಸ್ತುತ ಪರಿಷ್ಕೃತ ಮೊತ್ತ 40,557.09 ಕೋಟಿ ರೂಪಾಯಿ ಅಂದಾಜಿಸಲಾಗಿದೆ.

ಆಲಮಟ್ಟಿ ಜಲಾಶಯ ಎತ್ತರಕ್ಕೆ ಸರ್ಕಾರ ಬದ್ಧ

ಬೆಂಗಳೂರು: ಆಲಮಟ್ಟಿ ಅಣೆಕಟ್ಟಿನ ಎತ್ತರವನ್ನು 518 ರಿಂದ 524 ಮೀಟರ್‌ಗೆ ಹೆಚ್ಚಿಸುವ ರಾಜ್ಯ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕೃಷ್ಣಾ ಮೇಲ್ದಂಡೆ ಯೋಜನೆ ಹಂತ -3 ರಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ನ್ಯಾಯಯುತ ಪರಿಹಾರವನ್ನು ನೀಡಲು ಬದ್ಧವಾಗಿದೆ ಎಂದು ಬುಧವಾರ ಹೇಳಿದ್ದಾರೆ.

ವಿಧಾನಸೌಧದ ಸಭಾಂಗಣದಲ್ಲಿ ನಡೆದ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ -3 ರ ಅನುಷ್ಠಾನ ಕುರಿತಾದ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ಭೂಮಿ ಕಳೆದುಕೊಳ್ಳುವವರಿಗೆ ಸೂಕ್ತ ಪ್ಯಾಕೇಜ್ ನೀಡಲಾಗುವುದು. ಈ ಬಗ್ಗೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣ-2 ರ ತೀರ್ಪಿನ ಅನ್ವಯ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಅನುಷ್ಠಾನಕ್ಕಾಗಿ 130 ಟಿಎಂಸಿ ನೀರಿನ ಹಂಚಿಕೆ ಮಾಡಿದ್ದು, ಇದರಿಂದ 5.94 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಸಾಧ್ಯವಾಗಲಿದೆ. ಕೃಷ್ಣಾ ಮೇಲ್ದಂಡೆ ಯೋಜನೆ ಹಂತ -3ರಲ್ಲಿ ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣಾ ಮಟ್ಟ 519 ಮೀಟರ್ ನಿಂದ 524 ಮೀಟರ್ ಗೆ ಎತ್ತರಿಸುವುದರಿಂದ ಹೆಚ್ಚುವರಿಯಾಗಿ 100 ಟಿಎಂಸಿ ನೀರನ್ನು ಸಂಗ್ರಹಿಸಬಹುದು ಎಂದು ತಿಳಿಸಿದರು.

ಸಭೆಯಲ್ಲಿ ಉಪಮುಖ್ಯಮಂತ್ರಿ ಮತ್ತು ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವ ಎಚ್. ಕೆ. ಪಾಟೀಲ್ ಮತ್ತು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಅವರು ಉಪಸ್ಥಿತರಿದ್ದರು.

ಕುವೆಂಪು ಅವರಿಗೆ ಭಾರತ ರತ್ನ: ಕೇಂದ್ರಕ್ಕೆ ಶಿಫಾರಸ್ಸು

ಬೆಂಗಳೂರು: ರಾಷ್ಟ್ರಕವಿ ಕುಪ್ಪಳ್ಳಿ ವೆಂಕಟಪ್ಪ ಪುಟ್ಟಪ್ಪ (ಕುವೆಂಪು) ಅವರಿಗೆ ಮರಣೋತ್ತರವಾಗಿ ಭಾರತ ರತ್ನ ಪ್ರಶಸ್ತಿ ನೀಡುವಂತೆ ಕೇಂದ್ರ ಸರಕಾರಕ್ಕೆ ಶಿಫಾರಸ್ಸು ಮಾಡಲು ಸಚಿವ ಸಂಪುಟ ತೀರ್ಮಾನಿಸಿದೆ.



ಗುರುವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಸಚಿವ ಸಭೆಯಲ್ಲಿ ರಾಷ್ಟ್ರಕವಿ ಕುವೆಂಪು ಅವರಿಗೆ ಕೇಂದ್ರ ಸರಕಾರ ಮರಣೋತ್ತರವಾಗಿ ಭಾರತ ರತ್ನ ಪ್ರಶಸ್ತಿ ನೀಡುವಂತೆ ರಾಜ್ಯ ಸರಕಾರ ಶಿಫಾರಸು ಮಾಡಲು ಸಚಿವ ಸಂಪುಟ ತೀರ್ಮಾನ ಕೈಗೊಂಡಿದೆ. ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್, ಯುಗದ ಕವಿ, ಜಗದ ಕವಿ ಎಂದೇ ಖ್ಯಾತರಾಗಿರುವ ರಾಷ್ಟ್ರಕವಿ ಕುವೆಂಪು ಅವರ ಹೆಸರನ್ನು ಕೇಳದವರಿಲ್ಲ. ಅವರು ಕನ್ನಡ ಸಾಹಿತ್ಯ, ಸಂಸ್ಕೃತಿಯ ಶತ ಪುರುಷರೂ ಆಗಿದ್ದು, ಮರಣೋತ್ತರವಾಗಿ ಭಾರತ ರತ್ನ ಪ್ರಶಸ್ತಿ ನೀಡಲು ಕೇಂದ್ರಕ್ಕೆ ರಾಜ್ಯವು ಶಿಫಾರಸು ಮಾಡಿದೆ ಎಂದು ನುಡಿದರು.

ರಷ್ಯಾ ಸೇನೆಗೆ ಸೇರದಂತೆ ಎಚ್ಚರಿಕೆ ನೀಡಿದ ಕೇಂದ್ರ

ಹೊಸದಿಲಿ: ಹಲವಾರು ಭಾರತೀಯರನ್ನು ರಷ್ಯಾದ ಸೇನೆಗೆ ಸೇರಿಸಿಕೊಳ್ಳಲಾಗಿದೆ ಮತ್ತು ಯುದ್ಧ ವಲಯಗಳಲ್ಲಿ ನಿಯೋಜಿಸಲಾಗಿದೆ ಎಂಬ ವರದಿಗಳ ಹಿನ್ನೆಲೆಯಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವಾಲಯ(ಎಂಇಎ) ರಷ್ಯಾದ ಸೇನೆಯನ್ನು ಸೇರದಂತೆ ಭಾರತೀಯ ಪ್ರಜೆಗಳಿಗೆ ತನ್ನ ಎಚ್ಚರಿಕೆಯನ್ನು ಪುನರುಚ್ಚರಿಸಿದೆ. ಕೇಂದ್ರವು ಕಳೆದೊಂದು ವರ್ಷದಿಂದಲೂ ಹಲವಾರು ಸಂದರ್ಭಗಳಲ್ಲಿ ಇಂತಹ ನೇಮಕಾತಿಗಳ ಅಪಾಯಗಳನ್ನು ಆಗಾಗ್ಗೆ ಒತ್ತಿ ಹೇಳಿದೆ ಮತ್ತು ರಷ್ಯಾದ ಸೇನೆಯನ್ನು ಸೇರುವುದರಿಂದ ದೂರವುಳಿಯುವಂತೆ ಭಾರತೀಯ ಪ್ರಜೆಗಳನ್ನು ಆಗ್ರಹಿಸಿದೆ ಎಂದು ಎಂಇಎ ವಕ್ತಾರ ರಣಧೀರ ಜೈಸ್ವಾಲ್ ಅವರು ಗುರುವಾರ ಅಧಿಸೂಚನೆಯಲ್ಲಿ ತಿಳಿಸಿದ್ದಾರೆ.

'ನಾವು ಈ ವಿಷಯದಲ್ಲಿ ದಿಲ್ಲಿ ಮತ್ತು ಮಾಸ್ಕೋದಲ್ಲಿನ ರಷ್ಯಾದ ಅಧಿಕಾರಿಗಳೊಂದಿಗೆ ಚರ್ಚಿಸಿದ್ದು, ಈ ಪರಿಪಾಠವನ್ನು ಅಂತ್ಯಗೊಳಿಸುವಂತೆ ಮತ್ತು ನಮ್ಮ ಪ್ರಜೆಗಳನ್ನು ಬಿಡುಗಡೆ ಮಾಡುವಂತೆ ಕೇಳಿಕೊಂಡಿದ್ದೇವೆ. ನಾವು ಪೀಡಿತ ಭಾರತೀಯ ನಾಗರಿಕರ ಕುಟುಂಬಗಳೊಂದಿಗೂ ಸಂಪರ್ಕದಲ್ಲಿದ್ದೇವೆ' ಎಂದು ತಿಳಿಸಿರುವ ಜೈಸ್ವಾಲ್, 'ರಷ್ಯಾದ ಸೇನೆಗೆ ಸೇರ್ಪಡೆಯು ಅಪಾಯದಿಂದ ತುಂಬಿರುವುದರಿಂದ ಅಂತಹ ಯಾವುದೇ ಕೊಡುಗೆಗಳಿಂದ ದೂರವಿರುವಂತೆ ನಾವು ಮತ್ತೊಮ್ಮೆ ಎಲ್ಲ ಭಾರತೀಯ ಪ್ರಜೆಗಳನ್ನು ಬಲವಾಗಿ ಒತ್ತಾಯಿಸುತ್ತೇವೆ ' ಎಂದು ಹೇಳಿದ್ದಾರೆ.

ನಮಗೆ ನಿರ್ಮಾಣ ಕ್ಷೇತ್ರದಲ್ಲಿ ಉದ್ಯೋಗದ ಆಮಿಷವೊಡ್ಡಿ ರಷ್ಯಾಕ್ಕೆ ಪ್ರಯಾಣಿಸುವಂತೆ ಮಾಡಲಾಗಿತ್ತು, ಆದರೆ ಇಲ್ಲಿ ಬಂದ ಬಳಿಕ ಮುಂಚೂಣಿಯ ಯುದ್ಧರಂಗಕ್ಕೆ ನಿಯೋಜಿಸುವ ಮೂಲಕ ನಮ್ಮನ್ನು ವಂಚಿಸಲಾಗಿದೆ ಎಂದು ಪೂರ್ವ ಉಕ್ರೇನ್‌ನ ಡೊನೆಟ್ಸ್ಕ್ ಪ್ರದೇಶದಲ್ಲಿ ಸಿಕ್ಕಿ ಹಾಕಿಕೊಂಡಿರುವ ಇಬ್ಬರು ಭಾರತೀಯರನ್ನು ಉಲ್ಲೇಖಿಸಿ ಸುದ್ದಿಸಂಸ್ಥೆಯು ವರದಿ ಮಾಡಿದ ಬಳಿಕ ಎಂಇಎ ಈ ಎಚ್ಚರಿಕೆಯನ್ನು ಹೊರಡಿಸಿದೆ. ನವಂಬರ್ 2024ರಲ್ಲಿ ರಷ್ಯನ್ ಪಡೆಗಳು ವಶಪಡಿಸಿಕೊಂಡ ಸೆಲಿಡೋವ್ ಪಟ್ಟಣದಿಂದ ದೂರವಾಣಿ ಮೂಲಕ ಮಾತನಾಡಿರುವ ಈ ಇಬ್ಬರು,ಇನ್ನೂ ಕನಿಷ್ಠ 13 ಭಾರತೀಯರು ಇಂತಹುದೇ ಪರಿಸ್ಥಿತಿಗಳನ್ನು ಎದುರಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ವಿಷ್ಣುವರ್ಧನ್, ಸರೋಜಾದೇವಿಗೆ ಮರಣೋತ್ತರ 'ಕರ್ನಾಟಕ ರತ್ನ'

ಬೆಂಗಳೂರು: ವಿಷ್ಣು ಅಭಿಮಾನಿಗಳ ದಶಕಗಳ ಬೇಡಿಕೆ ಫಲಿಸಿದ್ದು ರಾಜ್ಯ ಸರ್ಕಾರ ಸಾಹಸಸಿಂಹ ವಿಷ್ಣುವರ್ಧನ್ ಹಾಗೂ ಹಿರಿಯ ನಟಿ ಸರೋಜಾದೇವಿಗೆ ಮರಣೋತ್ತರ ಕರ್ನಾಟಕ ರತ್ನ ಪ್ರಶಸ್ತಿ ಘೋಷಿಸಿದೆ.

ನಟರಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡುವ ಬಗ್ಗೆ ಇಂದಿನ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಯಿತು. ಇನ್ನು ಪ್ರಶಸ್ತಿಯನ್ನು ಯಾವಾಗ, ಎಲ್ಲಿ ಪ್ರದಾನ ಮಾಡಬೇಕೆಂದು ಮುಂದೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ಧರಿಸಲಿದೆ. ಇಂದಿನ ಸಂಪುಟ ಸಭೆಯಲ್ಲಿ ರಾಷ್ಟ್ರಕವಿ ಕುವೆಂಪು ಅವರಿಗೆ ಭಾರತ ರತ್ನ ನೀಡಬೇಕೆಂದು ಕೇಂದ್ರಕ್ಕೆ ಪತ್ರ ಕಳುಹಿಸಲು ನಿರ್ಣಯ ಅಂಗೀಕರಿಸಲಾಯಿತು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವ ಎಚ್ ಕೆ ಪಾಟೀಲ್ ತಿಳಿಸಿದ್ದಾರೆ. ಇತ್ತೀಚೆಗಷ್ಟೇ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿದ್ದ ಹಿರಿಯ ನಟಿ ಭಾರತಿ ವಿಷ್ಣುವರ್ಧನ್, ಅನಿರುದ್ಧ್ ಅವರು ಮನವಿ ಮಾಡಿಕೊಂಡಿದ್ದರು. ಅಲ್ಲದೇ, ಕನ್ನಡ ಚಿತ್ರರಂಗದ ಹಿರಿಯ ನಟಿಯರಾದ ಜಯಮಾಲಾ, ಶ್ರುತಿ, ಮಾಳವಿಕಾ ಅವಿನಾಶ್

ಅವರು ಕೂಡ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ವಿಷ್ಣುವರ್ಧನ್ ಮತ್ತು ಬಿ. ಸರೋಜಾದೇವಿಗೆ ಮರಣೋತ್ತರವಾಗಿ 'ಕರ್ನಾಟಕ ರತ್ನ' ಪ್ರಶಸ್ತಿ ನೀಡಬೇಕು ಎಂದು ಮನವಿ ಮಾಡಿದ್ದರು. 1972ರಲ್ಲಿ ವಂಶವೃಕ್ಷ ಚಿತ್ರದಲ್ಲಿ ನಟಿಸಿದ್ದ ವಿಷ್ಣುವರ್ಧನ್ ಅವರು ಅದೇ ವರ್ಷ ಬಿಡುಗಡೆಯಾಗಿದ್ದ ದಿಗ್ಗಜ ನಿರ್ದೇಶಕ ಪುಟ್ಟಣ್ಣ ಕಣಗಾಲ್ ನಿರ್ದೇಶನದ 'ನಾಗರಹಾವು' ಚಿತ್ರದ ಮೂಲಕ ಪೂರ್ಣ ಪ್ರಮಾಣದ ನಾಯಕ ನಟನಾಗಿ ಕಾಣಿಸಿಕೊಂಡರು. ಈ ಚಿತ್ರ ಬ್ಲಾಕ್ ಬಸ್ಟರ್ ಚಿತ್ರವಾಗಿದ್ದು ಮೊದಲ ಪ್ರಯತ್ನದಲ್ಲೇ ವಿಷ್ಣುವರ್ಧನ್ ದೊಡ್ಡ ಅಭಿಮಾನಿ ಬಳಗವನ್ನು ಸೃಷ್ಟಿಸಿಕೊಂಡರು. ಕನ್ನಡ ಸೇರಿದಂತೆ ತಮಿಳು, ತೆಲುಗು, ಮಲಯಾಳ, ಹಿಂದಿ ಭಾಷೆಗಳಲ್ಲಿ ಸುಮಾರು 220 ಸಿನಿಮಾಗಳಲ್ಲಿ ವಿಷ್ಣುವರ್ಧನ್ ನಟಿಸಿದ್ದಾರೆ. ಬೆಂಗಳೂರು ವಿಶ್ವವಿದ್ಯಾಲಯವು 2005ರಲ್ಲಿ ವಿಷ್ಣುವರ್ಧನ್ ಅವರಿಗೆ ಗೌರವ ಡಾಕ್ಟರೇಟ್ ಕೊಟ್ಟು ಗೌರವಿಸಿತ್ತು.

ಸರೋಜಾದೇವಿ ಹಿನ್ನಲೆ: ಕನ್ನಡದ ಹಿರಿಯ ಚಲನಚಿತ್ರ ನಟಿಯರಲ್ಲಿ ಬಿ. ಸರೋಜಾದೇವಿ ಸಹ ಒಬ್ಬರು. ಒಂದು ಕಾಲದಲ್ಲಿ ಕನ್ನಡ ಬೆಳ್ಳಿತೆರೆಯಲ್ಲಿ ಬೆಳಗಿದ ಅಭಿನೇತ್ರಿ. ಕನ್ನಡ, ತಮಿಳು, ತೆಲುಗು ಮತ್ತು ಹಿಂದಿ ಚಿತ್ರಗಳಲ್ಲಿ ನಟಿಸಿರುವ ಭಾರತೀಯ ನಟಿಯಾಗಿ ಗುರುತಿಸಿಕೊಂಡರು. ಅವರು ಸುಮಾರು 200 ಚಿತ್ರಗಳಲ್ಲಿ ನಟಿಸಿದ್ದಾರೆ. ಕನ್ನಡದಲ್ಲಿ 'ಅಭಿನಯ ಸರಸ್ವತಿ' ಮತ್ತು ತಮಿಳಿನಲ್ಲಿ 'ಕನ್ನಡತು ಪೈಂಗಿಲಿ' (ಕನ್ನಡದ ಗಿಳಿ) ಎಂಬ ಉಪನಾಮಗಳಿಂದ ಕರೆಯಲಾಗುತ್ತದೆ. ಸರೋಜಾದೇವಿ ಅವರು ಹಲವು ಪ್ರಶಸ್ತಿಗಳನ್ನು ಮುಡಿಗೇರಿಸಿಕೊಂಡಿದ್ದಾರೆ. ಭಾರತದ 60ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಭಾರತ ಸರ್ಕಾರ 2008ರ ಜೀವಮಾನ ಸಾಧನೆ ಪ್ರಶಸ್ತಿ ನೀಡಿತ್ತು. ಇನ್ನು 1992ರಲ್ಲಿ 'ಪದ್ಮಭೂಷಣ ಪ್ರಶಸ್ತಿ' ಮತ್ತು 1969ರಲ್ಲಿ ಪದ್ಮಶ್ರೀ ಪಡೆದಿದ್ದರು.

ನೇಪಾಳದ ಪಿಎಂ ಹುದ್ದೆಗೆ ಕರ್ಮಂಡು ಮೇಯರ್ ಹೆಸರು

ಬಾಲೆ

ವಿಶ್ವ ಪ್ರವಾಸೋದ್ಯಮ ದಿನಾಚರಣೆ

ಬೆಳಗಾವಿ: "ಪ್ರವಾಸೋದ್ಯಮ ಹಾಗೂ ಸುಸ್ಥಿರ ಪರಿವರ್ತನೆ" ಎಂಬ ಸಂದೇಶದ ಅನುಗುಣವಾಗಿ ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆಯ ವತಿಯಿಂದ ವಿಶ್ವ ಪ್ರವಾಸೋದ್ಯಮ ದಿನಾಚರಣೆ–2025 ಯನ್ನು ಶನಿವಾರ (ಸೆ.27) ಬೆಳಿಗ್ಗೆ 11 ಗಂಟೆಗೆ ಚನ್ನಮ್ಮನ ಕಿತ್ತೂರು ತಾಲೂಕಿನ ಕಿತ್ತೂರು ಕೋಟೆ ಆವರಣದಲ್ಲಿ ವಿಶ್ವ ಪ್ರವಾಸೋದ್ಯಮ ದಿನಾಚರಣೆ–2025 ಕಾರ್ಯಕ್ರಮ ಜರುಗಲಿದೆ.

ವಿಶ್ವ ಪ್ರವಾಸೋದ್ಯಮ ದಿನಾಚರಣೆ–2025 ಪ್ರಯುಕ್ತ ಬೆಳಗಾವಿ ಜಿಲ್ಲೆಯ ವಿಶೇಷತೆ ಕುರಿತು ಉತ್ತಮ ವೀಡಿಯೋ ಮತ್ತು ಫೋಟೋ ತೆಗೆಯುವ ಹಾಗೂ ಪ್ರಬಂಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು, ಆಸಕ್ತರು ತಾವು ತೆಗೆದ ವೀಡಿಯೋ ಮತ್ತು ಫೋಟೋಗಳನ್ನು ದಿನಾಂಕ: 24–09–2025ರ ಒಳಗಾಗಿ ಇ–ಮೇಲ್: ddtourismb@gmail.com ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9591778824 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರವಾಸೋದ್ಯಮ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೀಕ್ಷಾಭೂಮಿ ಯಾತ್ರೆಗೆ ಅರ್ಜಿ ಅವಧಿ ವಿಸ್ತರಣೆ

ಬೆಳಗಾವಿ: 2025–26ನೇ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾಭೂಮಿ ಯಾತ್ರೆಗೆ ಪ್ರಯಾಣಿಸಲು ಅರ್ಜಿ ಸಲ್ಲಿಸಲು ಸೆ.09 ಅಂತಿಮ ದಿನಾಂಕವಾಗಿ ನಿಗಧಿಪಡಿಸಲಾಗಿತ್ತು, ಅದನ್ನು ಸೆ.15ರ ವರೆಗೆ ಅವಧಿ ವಿಸ್ತರಿಸಲಾಗಿದೆ. ಡಾ.ಬಿ.ಆರ್.ಅಂಬೇಡ್ಕರ್ ದೀಕ್ಷಾಭೂಮಿ ಸಂದರ್ಶಿಸಲು ಬಯಸುವ ಯಾತ್ರಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ ಛಿಣಣಥಿ://ತಿಜ.ಛಿಚಿಡಿಟಿಚಿಣಚಿಛಿಚಿ.ಠಠಠ.ಟಿ ಮೂಲಕ 15 ಸೆಪ್ಟೆಂಬರ್ 2025ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ ಬೆಳಗಾವಿ ಕಛೇರಿ ಹಾಗೂ ತಾಲೂಕು ಮಟ್ಟದ ಕಛೇರಿಗಳಿಗೆ ಸಂಪರ್ಕಿಸಬಹುದಾಗಿದೆ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚುವರಿ ಮರು ಹಂಚಿಕೆ ಕೌನ್ಸಲಿಂಗ್ ಪ್ರಕ್ರಿಯೆ

ಬೆಳಗಾವಿ: 2024–25 ನೇ ಸಾಲಿನ ಸರಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರ ಹೆಚ್ಚುವರಿ ಮರು ಹಂಚಿಕೆ ಕೌನ್ಸಲಿಂಗ್ ಪ್ರಕ್ರಿಯೆಗಳನ್ನು ನಗರದ ಬಿ.ಕೆ.ಮಾಡಲ್ ಪ್ರೌಢ ಶಾಲೆ ಕ್ಯಾಂಪ್ ಬೆಳಗಾವಿ ಇಲ್ಲಿ ಜರುಗಲಿದೆ. ಪ್ರಾಥಮಿಕ ವಿಭಾಗಕ್ಕೆ ದಿನಾಂಕ: 11–09–2025 ರಂದು ಹಾಗೂ ಪ್ರೌಢಶಾಲಾ ವಿಭಾಗಕ್ಕೆ ದಿನಾಂಕ: 12–09–2025 ರಂದು ಜರುಗಲಿದೆ. ಹೆಚ್ಚುವರಿ ಪಟ್ಟಿಯಲ್ಲಿರುವ ಶಿಕ್ಷಕರು ಕಡ್ಡಾಯವಾಗಿ ಆಯೋಜಿಸಿದ ದಿನಾಂಕದಂದು ಬೆಳಿಗ್ಗೆ 10 ಗಂಟೆಗೆ ಹಾಜರಾಗಬೇಕೆಂದು ಶಾಲಾ ಶಿಕ್ಷಣ ಇಲಾಖೆ ಬೆಳಗಾವಿ (ದ) ಉಪನಿರ್ದೇಶಕರು (ಆ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಮಟ್ಟದ ಚಿತ್ರಕಲಾ ಸ್ಪರ್ಧೆ

ಬೆಳಗಾವಿ,: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಪ್ರಯುಕ್ತ ದಿನಾಂಕ: 12–09–2025 ರಂದು ಬೆಳಿಗ್ಗೆ 8.30 ರಿಂದ 10 ಗಂಟೆವರೆಗೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ಉದ್ಯಾನವನದಲ್ಲಿ ಜಿಲ್ಲಾ ಮಟ್ಟದ ಚಿತ್ರಕಲಾ ಸ್ಪರ್ಧೆಯನ್ನು (ಅಳತೆ 12"*18") ಆಯೋಜಿಸಲಾಗಿದೆ. ಅದೇ ತೆರನಾಗಿ ಹವ್ಯಾಸಿ ಫೋಟೋಗ್ರಾಫರಗಳಿಗೆ ಭಾವಚಿತ್ರ ಫೋಟೋಗ್ರಾಫಿ ಸ್ಪರ್ಧೆಯನ್ನು ಹಮ್ಮಿಕೊಂಡಿದ್ದು, ಸ್ಪರ್ಧಾಳುಗಳು ಒಂದು ಭಾವ ಚಿತ್ರವನ್ನು (ಫೋಟೋಗ್ರಾಫಿ) 8"*12" ಅಳತೆಯ ಹಾಗೂ 300 ರೆಜುಲೇಶನ್ ಜೆಪಿಜಿ ಮೋಡನಲ್ಲಿ ಇ–ಮೇಲ್: dsw.bgm@gmail.com ವಿಳಾಸಕ್ಕೆ ದಿನಾಂಕ: 12–09–2025ರ ಒಳಗಾಗಿ ಭಾವಚಿತ್ರವನ್ನು ಕಳುಹಿಸಬಹುದಾಗಿದೆ.ಭಾರತ ವಿಶ್ವದ ಅತೀ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರ, ಮತದಾನದ ಮಹತ್ವ, ನಮ್ಮ ಮತ ನಮ್ಮ ಹಕ್ಕು, ಜಾಗೃತ ಮತದಾನ ಸದೃಢ ಪ್ರಜಾಪ್ರಭುತ್ವ, ಸಮಾನತೆ ಮತ್ತು ನ್ಯಾಯ ಈ ವಿಷಯಗಳು ಸ್ಪರ್ಧೆಯ ಧ್ಯೇಯಗಳಾಗಿವೆ.ಆಸಕ್ತರು ದಿನಾಂಕ: 11–09–2025 ರೊಳಗಾಗಿ ಮೊಬೈಲ್ ಸಂಖ್ಯೆ: 9008450711 ಗೆ ಕರೆ ಮಾಡಿ ತಮ್ಮ ಹೆಸರನ್ನು ನೊಂದಣಿ ಮಾಡಿಕೊಳ್ಳಬಹುದಾಗಿದೆ. ಭಾಗವಹಿಸುವ ಕಲಾವಿದರು ಸ್ಪರ್ಧೆಗೆ ಬೇಕಾಗುವ ಪರಿಕರ/ಸಾಧನಗಳನ್ನು ತಾವೇ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿವಿಧ ಕೌಶಲ್ಯಗಳ ತರಬೇತಿ

ವಿಜಯಪುರ: 2025–26ನೇ ಸಾಲಿನಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಕರ್ನಾಟಕ ರಾಜ್ಯ ಕೌಶಲ್ಯ ಓಲಿಂಪಿಕ್ಸ್2025 ಆರಂಭಿಸಿದೆ. ಕರ್ನಾಟಕ ರಾಜ್ಯ ಕೌಶಲ್ಯ ಓಲಿಂಪಿಕ್ಸ್ 2025 ಅನ್ನು ಜಿಲ್ಲಾ ಮಟ್ಟದಲ್ಲಿ ಆಯೋಜಿಸಿ, ಜಿಲ್ಲಾ ಮಟ್ಟದಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಸುಧಾರಿತ ತರಬೇತಿ ನೀಡಿ, ವಿಭಾಗ ಮಟ್ಟ ಮತ್ತು ರಾಜ್ಯ ಮಟ್ಟಕ್ಕೆ ಆಯ್ಕೆ ಮಾಡಿ, ಮುಂದಿನ ದಿನಗಳಲ್ಲಿ ಜರಗುವ India Skill competition Karnataka-2025&World Skills-2026 ಕಾರ್ಯಕ್ರಮದಲ್ಲಿ ಭಾರತವನ್ನು ಪ್ರತಿನಿಧಿಸುವ ಅವಕಾಶ ನೀಡಲಾಗುವುದು. ಈ ಕಾರ್ಯಕ್ರಮವು ಚೀನಾ ದೇಶದ ಶಾಂಘೈನಲ್ಲಿ ಆಯೋಜನೆಗೊಳ್ಳುವುದು.ಅರ್ಹ ಹಾಗೂ ಆಸಕ್ತ ವಿದ್ಯಾರ್ಥಿಗಳಿಗೆ 63 ವಿವಿಧ ಕೌಶಲ್ಯಗಳ ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ.ಆನ್‌ಲೈನ್ ನೋಂದಣಿಗಾಗಿ http://www.skillindiadigital.gov.in/home ಲಿಂಕ್‌ನ್ನು ಉಪಯೋಗಿಸಿ ಅಥವಾ ಇಲ್ಲಿರುವ ಕ್ಯೂಆರ್–ಕೋಡ್‌ನ್ನು ಸ್ಕ್ಯಾನ್ ಮಾಡಿ ದಿನಾಂಕ:30–09–2025 ರೊಳಗಾಗಿ ನೋಂದಾಯಿಸಿ ಕೊಳ್ಳಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ವಿಜಯಪುರ ಜಿಲ್ಲೆಯ ಬಾಗಲಕೋಟೆ ರಸ್ತೆ, ಮಹಾನಗರ ಪಾಲಿಕೆ ಹತ್ತಿರವಿರುವ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ದೂ.ಸಂಖ್ಯೆ: 08352–297019,ಮೊ: 9741753565, ಮೊ: 8217615257 ಹಾಗೂ ಮೊ: 9620202102 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೆ.15ರಂದು ಸೈಕಲ್ ಜಾಥಾ

ಹಾವೇರಿ: ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಸೆ.15 ರಂದು ಬೆಳಿಗ್ಗೆ 8–30ಕ್ಕೆ ಹಾವೇರಿ ಜಿಲ್ಲಾ ಕೇಂದ್ರದಲ್ಲಿ ಸೈಕಲ್ ಜಾಥಾ ಆಯೋಜಿಸಲಾಗುತ್ತಿದೆ. ಅದೇ ದಿನ ಬೆಂಗಳೂರಿನ ವಿಧಾನ ಸೌಧದಲ್ಲಿ ಜರಗುವ ಕಾರ್ಯಕ್ರಮಕ್ಕೆ ಪ್ರತಿ ಜಿಲ್ಲೆಯಿಂದ 10 ಬೈಕ್‌ಗಳನ್ನು ಕಳಿಸಿಕೊಡಲು ತಿಳಿಸಲಾಗಿದೆ. ಈ ಜಾಥಾದಲ್ಲಿ ಭಾಗವಹಿಸಲು ಆಸಕ್ತಿವುಳ್ಳವರು, ದಿನಾಂಕ 13–09–2025ರ ಸಂಜೆ 5 ಗಂಟೆಯೊಳಗಾಗಿ ಸಹಾಯಕ ನಿರ್ದೇಶಕರು, ಯುವಜನ ಮತ್ತು ಕ್ರೀಡಾ ಇಲಾಖೆ, ಹಾವೇರಿ ಈ ವಿಳಾಸದಲ್ಲಿ ಹೆಸರು ನೊಂದಾಯಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರತ್ನಾಪುರ ಭಂಡಾರದ ನಿಧಿ ಚಿತ್ರ ಬಿಡುಗಡೆ

ಮೋಳೆ: ಅಥಣಿಯ ಉದ್ಯಮಿ ರವಿ ಪೂಜಾರಿ ನಿರ್ಮಾಪಕತ್ವದಲ್ಲಿ ನಿರ್ಮಾಣಗೊಂಡ ರತ್ನಾಪುರ ಭಂಡಾರ ನಿಧಿ ಚಲನ ಚಿತ್ರ ಸೆ.12 ಶುಕ್ರವಾರದಂದು ಅದ್ದೂರಿಯಾಗಿ ರಾಜ್ಯಾದ್ಯಂತ ಹತ್ತಾರು ಥೇಟರ್ ಗಳಲ್ಲಿ ಪ್ರದರ್ಶನಗೊಳ್ಳಲಿದೆ ಎಂದು ಅಥಣಿ ಪುರಸಭಾ ಸದಸ್ಯ, ಉದ್ಯಮಿ ರಾವರಾಹೇಬ ಐಹೊಳೆ ಹೇಳಿದರು.

ಅವರು ಆರ್.ಎಸ್.ಪಿ ಸಭಾಂಗಣದಲ್ಲಿ ಆಯೋಜಿಸಿದ್ದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡುತ್ತಿದ್ದರು. ರವಿ ಪೂಜಾರಿ ಈ ಚಲನ ಚಿತ್ರದ ನಿರ್ಮಾಪಕರಷ್ಟೇ ಅಲ್ಲ ಚಿತ್ರದಲ್ಲಿ ಮುಖ್ಯ ಪಾತ್ರಧಾರಯಲ್ಲಿ ನಟನೆ ಕೂಡ ಮಾಡಿರುವ ಈ ಚಿತ್ರ ಯಶಸ್ವಿಯಾಗಿ ರಾಜ್ಯದ ಜನರ ಮನೆ ಮಾತಾಗಲಿ ಮತ್ತು ಈ ಚಿತ್ರ ಥೇಟರಗಳಲ್ಲಿ ನೂರು ದಿನ ಪ್ರದರ್ಶನಗೊಳ್ಳಲಿ ಎಂದ ಅವರು ಉತ್ತರ ಕರ್ನಾಟದ ಕನ್ನಡ ಪ್ರೇಮಿಯೋರ್ವರು ಧೈರ್ಯ ಮಾಡಿ ನಿರ್ಮಿಸಿದ ಈ ಚಲನ ಚಿತ್ರವನ್ನು ಹೆಚ್ಚಿನ ಸಂಖ್ಯೆಯಲ್ಲಿ ವೀಕ್ಷಿಸುವ ಮೂಲಕ ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು.

ಚಿತ್ರ ನಿರ್ಮಾಪಕ, ಉದ್ಯಮಿ ರವಿ ಪೂಜಾರಿ ಮಾತನಾಡಿ, ರತ್ನಾಪುರ ಭಾಂಡಾರ ನಿಧಿ ಎನ್ನುವ ನನ್ನ ಚೊಚ್ಚಲ ಸಿನೇಮಾ ಸೆ.12 ರಂದು ತೆರೆ ಕಾಣಲಿದ್ದು, ಸದ್ಯ ರಾಜ್ಯದ 10 ಥೇಟರಗಳಲ್ಲಿ ಒಂದೇ ದಿನ ತೆರೆ ಕಾಣುವ ಈ ಚಲನ ಚಿತ್ರ ಮುಂದಿನ ಕೆಲವೇ ದಿನಗಳಲ್ಲಿ ನೂರಕ್ಕೂ ಹೆಚ್ಚು ಥೇಟರಗಳಲ್ಲಿ ಯಶಸ್ವಿಯಾಗಿ ಪ್ರದರ್ಶನಗೊಳ್ಳಲಿದೆ ಎಂದ ಅವರು ಈ ಚಲನ ಚಿತ್ರವನ್ನು ಚಿತ್ರ ಕಲಾವಿದ ಹಾಲೇಶ ನಿರ್ದೇಶಿಸಿದ್ದು, ರಾಜ್ಯದ ಜನ ಈ ಚಿತ್ರವನ್ನು ವೀಕ್ಷಿಸುವ ಮೂಲಕ ಪ್ರೋತ್ಸಾಹಿಸಬೇಕು ಎಂದು ಮನವಿ ಮಾಡಿದರು. ಚಿತ್ರ ನಿರ್ದೇಶಕ ಹಾಲೇಶ ಮಾತನಾಡಿ, ರತ್ನಾಪುರ ಭಾಂಡಾರ ನಿಧಿ ಚಿತ್ರ ಬಿಡುಗಡೆಗೂ ಮುನ್ನ ಸೆನ್ಸರ್ ಸರ್ಟಿಫಿಕೇಟ್ ಪಡೆದುಕೊಳ್ಳುವುದು ಅಷ್ಟು ಸುಲಭದ ಮಾತಲ್ಲ ನಮ್ಮ ಜೊತೆಗೆ ಚಿತ್ರ ನಿರ್ಮಾಪಕರಾದ ರವಿ ಪೂಜಾರಿ ಇದ್ದರು ಹೀಗಾಗಿ ಯಾವುದೇ ಅಡಚಣೆ ಇಲ್ಲದೆ ನಮಗೆ ಸರ್ಟಿಫಿಕೇಟ್ ದೊರಕಿತು ಎಂದ ಅವರು ಎಲ್ಲರೂ ಚಲನಚಿತ್ರ ನೋಡಿ ನಮ್ಮನ್ನು ಪ್ರೋತ್ಸಾಹಿಸಿ ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಧುರೀಣರಾದ ಪ್ರಕಾಶ ಹಿಡಕಲ್, ಸಿದ್ದು ಪಾಟೀಲ, ತೆವರಟ್ಟಿಯ ವಿಠ್ಠಲ್ ಮಹಾರಾಜರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಿಗೆ ಉಚಿತ ಬ್ಯಾಗ್ ವಿತರಣೆ

ರಾಯಬಾಗ: ಶೈಕ್ಷಣಿಕ ಜೀವನದಲ್ಲಿ ಪ್ರಾಮಾಣಿಕವಾಗಿ ಕಷ್ಟಪಟ್ಟು ಓದಿದರೆ ನಿಮಗೆ ಇಷ್ಟಪಟ್ಟ ಹುದ್ದೆಗಳು ಕೈವಶವಾಗುತ್ತವೆ ಎಂದು ಮಹಾರಾಷ್ಟ್ರ ರಾಜ್ಯದ ಬ್ಯಾಂಕ್ ಆಫ್ ಇಂಡಿಯಾದ ಬೆಡಗ ಗ್ರಾಮದ ಶಾಖಾ ವ್ಯವಸ್ಥಾಪಕ ಬಸವರಾಜ ಕೋಳಿ ಹೇಳಿದರು.

ತಾಲೂಕಿನ ಸಿದ್ದಾಪುರ ತೋಟದ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಕಳೆದ ಮಂಗಳವಾರ ದಿ. 9 ರಂದುಬಡ ವಿದ್ಯಾರ್ಥಿಗಳಿಗೆ ಸ್ವಯಂ ಪ್ರೇರಣೆಯಿಂದ 7 ಸಾವಿರ ರೂಪಾಯಿ ಮೌಲ್ಯದ ಬ್ಯಾಗಗಳನ್ನು ವಿತರಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ನೀವೆಲ್ಲರೂ ಅತ್ಯಂತ ಶ್ರದ್ಧೆಯಿಂದ ಅಧ್ಯಯನದಲ್ಲಿ ತೊಡಗಿ ಪಾಲಕರ ಹಾಗೂ ನಿಮ್ಮ ಗುರುಗಳ ನಿರೀಕ್ಷೆಯನ್ನು ಹುಸಿ ಮಾಡದೇ ಅಪೂರ್ವ ಸಾಧಕರಾಗಿ ಹೊರಹೊಮ್ಮಿರಿ ಎಂದರು. ಶೈಕ್ಷಣಿಕ ಜೀವನದಲ್ಲಿ ಅನಿರೀಕ್ಷಿತ ಅನೇಕ ತೊಂದರೆ ತಾಪತ್ರಯಗಳು ಬರುತ್ತವೆ.ಅವುಗಳಿಗೆ ಹೆದರದೆ ಅತ್ಯಂತ ಸಂಯಮದಿಂದ ಆ ಎಲ್ಲ ತಾಪತ್ರಯಗಳನ್ನು ಸವಾಲಾಗಿ ಸ್ವೀಕರಿಸಿಕೊಂಡು ಪ್ರಗತಿಯ ದಿಟ್ಟ ಹೆಜ್ಜೆ ಇಡಲು ಖಂಡಿತವಾಗಿಯೂ ಸಾಧ್ಯ ಎಂದರು. ನಾನು ನಿಮ್ಮ ಹಾಗೆ ಬಾಲ್ಯದಲ್ಲಿ ಕಡು ಬಡತನದ ಹಿನ್ನೆಲೆಯಿಂದ ಬಂದವನಾಗಿದ್ದೇನೆ.

ಯಾವುದಕ್ಕು ಹತಾಶನಾಗದೇ ಸಕಾರಾತ್ಮಕ ಚಿಂತನೆಗಳನ್ನು ಮೈಗೂಡಿಸಿಕೊಂಡು ಕಠಿಣ ಪರಿಶ್ರಮ, ಕ್ರಿಯಾಶೀಲತೆ ಹಾಗೂ ಪ್ರಾಮಾಣಿಕತೆಯಿಂದ ಓದಿ ಈವಾಗ ಉನ್ನತ ಹುದ್ದೆಗೆ ಏರಲು ಸಾಧ್ಯವಾಯಿತು ಎಂದು ತಮ್ಮ ಸ್ವಾನುಭವಗಳನ್ನು ಸೊಗಸಾಗಿ ಹಂಚಿಕೊಂಡರು. ನೀವು ಕಷ್ಟ ಪಟ್ಟು ಓದಿದರೆ ನಿಸ್ಸಂದೇಹವಾಗಿ ಇಷ್ಟಪಟ್ಟ ಹುದ್ದೆಗಳು ಕೈವಶವಾಗುತ್ತವೆ ಎಂದು ಮಾರ್ಮಿಕವಾಗಿ ನುಡಿದರು. ಇದೇ ಸಂದರ್ಭದಲ್ಲಿ ಬಡ ವಿದ್ಯಾರ್ಥಿಗಳಿಗೆ ಬ್ಯಾಗಗಳನ್ನು ವಿತರಿಸಿದ ಬಸವರಾಜ ಕೋಳಿ ದಂಪತಿಗಳನ್ನು ಶಾಲೆಯ ಪ್ರಧಾನ ಗುರುಗಳಾದ ಕುಶಾಲ ಮಾದರ ಅವರು ಶಾಲು ಹೊದಿಸಿ ಸತ್ಕರಿಸಿ ಗೌರವಿಸಿದರು.

ಸಹ ಶಿಕ್ಷಕ ವಿ. ಪಿ. ಗಲಗಲಿ ಅವರು ಪೀಠಿಕಾ ನುಡಿಯಾಡಿದರು. ಮುಖ್ಯ ಗುರುಗಳಾದ ಕುಶಾಲ ಮಾದರ ಸಹಶಿಕ್ಷಕರುಗಳಾದ ಶಂಕರ ಮಿರ್ಜಿ, ಮಹಾದೇವ ಮಠಪತಿ, ತೇಜಶ್ರೀ ಪಾಟೀಲ, ಸುಮಾ ಪಾಟೀಲ, ಸುಷ್ಮಾ ಇಂಗಳಿ ಹಾಗೂ ಸುವರ್ಣ ಬಾನಿ ಉಪಸ್ಥಿತರಿದ್ದರು.

ತೇರದಾಳಗೆ ಪ್ರಜಾಸೌಧ ಮಂಜೂರು

ತೇರದಾಳ: ರಾಜ್ಯ ಸರಕಾರ ಬಜೆಟ್‌ನಲ್ಲಿ ಘೋಷಣೆ ಮಾಡಿದಂತೆ ತಾಲೂಕಿಗೊಂದು ಪ್ರಜಾಸೌಧ ಕಟ್ಟಡ ನೂತನ ತೇರದಾಳ ತಾಲೂಕಿಗೂ ಮಂಜೂರಾಗಿರುವ ಹಿನ್ನಲೆಯಲ್ಲಿ ತಾಲೂಕಿನ ಹನಗಂಡಿ ಗ್ರಾಮದ ಸರ್ವೇ ನಂಬರ 13ರಲ್ಲಿ (ಚನಾಳ ಲೇಔಟ್ ಹಿಂದುಗಡೆ) 3 ಎಕರೆ ಜಾಗ ಗುರುತಿಸಿ ಅನುಮೋದನೆಗಾಗಿ ಸರಕಾರಕ್ಕೆ ತಹಸೀಲ್ದಾರ್ ವಿಜಯಕುಮಾರ ಕಡಕೋಳ ಪ್ರಸ್ತಾವನೆ ಸಲ್ಲಿಸಿದ್ದರು. ಸರಕಾರ ಪ್ರಸ್ತಾವನೆಗೆ ಅನುಮೋದನೆ ನೀಡಿದ ಹಿನ್ನಲೆಯಲ್ಲಿ ಕಂದಾಯ ಹಾಗೂ ಸರ್ವೇ ಅಧಿಕಾರಿಗಳು ಸರ್ವೇ ನಂ 13ರಲ್ಲಿ ಗೊತ್ತುಪಡಿಸಿರುವ 3 ಎಕರೆ ಜಾಗವನ್ನು ಸರ್ವೇ ಮಾಡಿ ಸರಹದ್ದು ಗುರುತಿಸಲು ಪ್ರಾರಂಭಿಸಿದ್ದಾರೆ.

ಮೂರ್ನಾಲ್ಕು ದಿನಗಳಿಂದ ಜಾಗದಲ್ಲಿನ ಗಿಡಗಂಟಿಗಳನ್ನು ಜೆಸಿಬಿ ಮುಖಾಂತರ ಸ್ವಚ್ಛತೆ ಮಾಡಲಾಗಿದ್ದು, ಗುರುವಾರ ತಾಲೂಕು ಸರ್ವೇ ಅಧಿಕಾರಿ ಏಕನಾಥ ಮುಂಡಾದಾಸ ಕಂದಾಯ ನಿರೀಕ್ಷಕ ಪ್ರಕಾಶ ಮಠಪತಿ, ಗ್ರಾಮ ಆಡಳಿತಾಧಿಕಾರಿ ರೇವಣಸಿದ್ದ ಕಮತೆ, ಸಹಾಯಕರಾಗಿ ಮೆಹಬೂಬ ನದಾಫ್, ಸಿದ್ದು ಜಿರಾಳೆ, ಸಂತೋಷ ರೋಡಕರ ಸರಹದ್ದು ಗುರುತಿಸುವ ಕಾರ್ಯ ಪ್ರಾರಂಭಿಸಿದ್ದಾರೆ. ಪ್ರಜಾಸೌಧ ಕಟ್ಟಡಕ್ಕೆ ಸರಕಾರ 8.6 ಕೋಟಿ ಅನುದಾನ ಘೋಷಣೆ ಮಾಡಿದ್ದು, ಸರ್ವೇ ಕಾರ್ಯ ಮುಗಿಯುತ್ತಿದ್ದಂತೆ ಜಿಲ್ಲಾ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಬೇಟಿ ನೀಡಿ ಕ್ರೀಯಾಯೋಜನೆ ತಯಾರಿಸಲಿದ್ದಾರೆ.

ನಾಗರಿಕರಲ್ಲಿ ಹರ್ಷ–ಐದು ದಶಕಗಳ ಬೇಡಿಕೆಯಾಗಿದ್ದ ತೇರದಾಳ ತಾಲೂಕು ಕೊನೆಗೂ ಘೋಷಣೆಗೊಂಡಿದೆ. ಮೊದಲ ಹಂತದಲ್ಲಿ ತಹಸೀಲ್ದಾರ್ ಕಚೇರಿ ಪ್ರಾರಂಭಗೊಂಡಿದ್ದು, ಭೂಮಿ ತಂತ್ರಾಂಶ ಅಳವಡಿಕೆಯಾದರೆ ರೈತರ ಎಲ್ಲ ಕೆಲಸಗಳು ತೇರದಾಳದಲ್ಲಿಯೇ ನಡೆಯಲಿವೆ. ಈಗ ಸರಕಾರ ಪ್ರಜಾಸೌಧ ಮಂಜೂರುಗೊಳಿಸಿದ್ದು, ಕಟ್ಟಡಕ್ಕಾಗಿ ಜಾಗ ಕೂಡ ಗುರುತಿಸಿ ಕೆಲಸ ಪ್ರಾರಂಭಗೊಂಡಿರುವುದಕ್ಕೆ ಸಾರ್ವಜನಿಕರು ಹರ್ಷ ವ್ಯಕ್ತಪಡಿಸುತ್ತಿದ್ದಾರೆ. ಶೀಘ್ರದಲ್ಲಿ ತಾಲೂಕು ಕೇಂದ್ರ ಅಧಿಕೃತವಾಗಿ ಪ್ರಾರಂಭಗೊಳ್ಳಲಿ. ಹಾಗೂ ತಾಲೂಕು ಕಚೇರಿಗಳು ಪ್ರಾರಂಭಗೊಳ್ಳಲಿ ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಪಂ. ಪುಟ್ಟರಾಜ ಶಿವಯೋಗಳ 15ನೇ ಪುಣ್ಯಸ್ಮರಣೆ

ಗದಗ: ಈ ನಾಡಿನೊಳಗೆ ಸಾವಿರಾರು ಅಂಧ–ಅನಾಥ ಬಡಮಕ್ಕಳು ಬಿಕ್ಷಾ ಪಾತ್ರೆ ಬಿಟ್ಟು ಅಕ್ಷಯ ಪಾತ್ರೆ ಹಿಡಿದುಕೊಂಡು ಪ್ರಸಾದ ಸೇವಿಸುತ್ತಿದ್ದಾರೆ ಎಂದರೆ ಅದಕ್ಕೆ ಮುಖ್ಯ ಕಾರಣ ಸಂಗೀತದ ಅಕ್ಷಯ ಪಾತ್ರೆ ನೀಡಿದ ಪಂ. ಪುಟ್ಟರಾಜ ಕವಿ ಗವಾಯಿಗಳು ಎಂದು ನೀಲಗುಂದ ಗುದ್ನೇಶ್ವರ ಶ್ರೀಮಠದ ಪೂಜ್ಯಶ್ರೀ ಪ್ರಭುಲಿಂಗ ಮಹಾಸ್ವಾಮಿಗಳು ಹೇಳಿದರು.

ಅವರು ಯಳವತ್ತಿ ಗ್ರಾಮದಲ್ಲಿ ಗಾನಯೋಗಿ ಡಾ. ಪಂ. ಪುಟ್ಟರಾ

ಕ್ರೀಡೆಗಳು ಮನುಷ್ಯನ ಬದುಕಿಗೆ ಉತ್ಸಾಹ ತುಂಬಲಿವೆ

ಧಾರವಾಡ: ಯುವ ಜನಾಂಗದಲ್ಲಿ ಅಡಗಿದ ಅಗಾಧ ಶಕ್ತಿ ಸದ್ಬಳಸಿ, ಉನ್ನತ ಸಾಧನೆ ಮಾಡಬೇಕು. ಈ ಮೂಲಕ ತಂದೆ-ತಾಯಿ, ಕಲಿಸಿದ ಗುರು, ಸಮಾಜ ಹಾಗೂ ದೇಶದ ಋಣ ತೀರಿಸಬೇಕು ಎಂದು ಧಾರವಾಡ ಐಐಟಿ ನಿರ್ದೇಶಕ ಹಾಗೂ ಹಿರಿಯ ವಿಜ್ಞಾನಿ ಡಾ. ಎಸ್.ಎಂ.ಶಿವಪ್ರಸಾದ ಹೇಳಿದರು.

ಕರ್ನಾಟಕ ವಿದ್ಯಾವರ್ಧಕ ಸಂಘದ ಯುವಜನ ಮತ್ತು ಕ್ರೀಡಾ ಮಂಟಪವು ನಾಡೋಜ ಡಾ. ಪಾಟೀಲ ಪುಟ್ಟಪ್ಪ ಭವನದಲ್ಲಿ ಮಂಗಳವಾರ ಹಮ್ಮಿಕೊಂಡ ಪ್ರಸಕ್ತ ತ್ರೈವಾರ್ಷಿಕ ಅವಧಿಯ ಕಾರ್ಯಚಟುವಟಿಕೆಗಳ ಉದ್ಘಾಟನೆ ಹಾಗೂ ಉಪನ್ಯಾಸ ಕಾರ್ಯಕ್ರಮಕ್ಕೆ ಸಸಿಗೆ ನೀರೆರುವುದು ಮುಖಾಂತರ ಚಾಲನೆ ನೀಡಿ ಅವರು ಮಾತನಾಡಿದರು.

ಮನುಷ್ಯನ ಜೀವಿತ ಅವಧಿಯಲ್ಲಿ ಯೌವನದ ಬದುಕು ಬಹಳ ಸುಂದರ. ದುಶ್ಚಟಗಳಿಂದ ಈ ಯೌವನ ವ್ಯರ್ಥ ಮಾಡದೆ, ಸದ್ಗುಣಗಳು ಬೆಳೆಸಿಕೊಳ್ಳಬೇಕು. ಮತ್ತೊಬ್ಬರಿಗೆ ಮಾದರಿ ಆಗುವ ರೀತಿಯಲ್ಲಿ ಭವಿಷ್ಯ ಕಟ್ಟಿಕೊಳ್ಳಲು ಸಲಹೆ ನೀಡಿದರು.

ಕ್ರೀಡೆಗಳು ಮನುಷ್ಯನ ಬದುಕಿಗೆ ಉಲ್ಲಾಸ, ಉತ್ಸಾಹ ತುಂಬಲಿವೆ. ಹೀಗಾಗಿ ಸೋಲು-ಗೆಲವು ಸಮ ಚಿತ್ತದಿಂದ ಸ್ವೀಕರಿಸಬೇಕು. ಸ್ಪರ್ಧಾ ಮನೋಭಾವ ಉತ್ತಮ ಕ್ರೀಡಾರ್ಥಿ ಲಕ್ಷಣ. ಉನ್ನತ ಗುರಿಯೊಂದಿಗೆ ಸಾಧನೆ ಹಾದಿಯಲ್ಲಿ ಸಾಗಿದರೆ ಮಾತ್ರವೇ ಗುರಿ ಮುಟ್ಟಲು ಸಾಧ್ಯ ಎಂದು ತಿಳಿಸಿದರು.

ಹು-ಧಾ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್, ಯುವಜನಾಂಗದ ಮೇಲೆ ದೊಡ್ಡ ಜವಾಬ್ದಾರಿ ಇದೆ. ಏಕೆಂದರೆ, ಯುವ ಜನಾಂಗವೇ ಈ ದೇಶದ ಆಸ್ತಿ. ಇದು ಎಂದಿಗೂ ವ್ಯರ್ಥ ಆಗಬಾರದು. ಹೀಗಾಗಿ ಯುವಜನಾಂಗ ತಮ್ಮ ಜವಾಬ್ದಾರಿ ಅರಿತು, ಬದುಕಿನಲ್ಲಿ ಎಚ್ಚರಿಕೆಯ ಹೆಜ್ಜೆ ಇಡುವಂತೆಯೂ ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳು ಸಮಯ, ಶ್ರಮ, ವ್ಯಕ್ತಿತ್ವ ವಿಕಸನಕ್ಕೆ ಹೆಚ್ಚು ಒತ್ತು ನೀಡಬೇಕು. ದೊಡ್ಡ ದೊಡ್ಡ ಕನಸು ಕಂಡು, ನನಸು ಮಾಡಿಕೊಳ್ಳುವ ಕಡೆಗೂ ಸಹ ಚಿತ್ತ ಹರಿಸಬೇಕು. ತಂದೆ-ತಾಯಿ, ಗುರು ಮತ್ತು ಹಿರಿಯರಿಗೆ ಗೌರವ ಕೊಡುವ ಸಂಸ್ಕೃತಿ ಹಾಗೂ ಸಂಸ್ಕಾರ ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ನಂತರ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಪ್ರೇಮಾ ಬೂದಿಹಾಳ ಮಲ್ಲಕಂಬ, ಕೆ.ಇ.ಬೋರ್ಡ್ ಪ್ರಥಮ ದರ್ಜೆ ಪದವಿ ಕಾಲೇಜಿನ ವಿದ್ಯಾರ್ಥಿಗಳು ನೃತ್ಯ ಹಾಗೂ ಜಿಗಳೂರು ಮಹಿಳಾ ಮಹಾವಿದ್ಯಾಲಯದ ದೇಶಭಕ್ತಿ ಗೀತೆಯನ್ನು ಪ್ರಸ್ತುತಪಡಿಸಿದರು. ಸರಕಾರಿ ಪದವಿ ಪೂರ್ವ ಕಲಾ,ವಾಣಿಜ್ಯ ಹಾಗೂ ವಿಜ್ಞಾನ ಕಾಲೇಜಿನ ವಿದ್ಯಾರ್ಥಿಗಳು ಸಮೂಹಗಾನ ಹಾಡಿದರು ಮತ್ತು ಮೃತ್ಯುಂಜಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ವಿದ್ಯಾರ್ಥಿಗಳು ನಾಟಕ ಪ್ರದರ್ಶನ ನೀಡಿದರು. ಸಂಘದ ಉಪಾಧ್ಯಕ್ಷ ಡಾ. ಸಂಜೀವ ಕುಲಕರ್ಣಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವೇದಿಕೆ ಮೇಲೆ ವಸಂತ ಮುರ್ಡೇಶ್ವರ ಇದ್ದರು.

ಸಮಾರಂಭದಲ್ಲಿ ಸತೀಶ ತುರಮರಿ, ಡಾ. ಜಿನದತ್ತ ಹಡಗಲಿ, ಡಾ. ಶೈಲಜಾ ತ. ಅಮರಶೆಟ್ಟಿ, ಡಾ. ಸುರೇಶ ಹೊರಕೇರಿ, ಸಿಪಿಐ ನಾಗಯ್ಯ ಕಾಡದೇವರ, ಪತ್ರಕರ್ತ ಲಿಂಗರಾಜ ಪಾಟೀಲ, ಡಾ ಬಾಬು ಬೆಣ್ಣಿ, ಶಿವನಯ್ಯ ಹಿರೇಮಠ, ದೀಪಕ ಬಾಣದ, ಡಾ. ಪ್ರಭಾ ನೀರಲಗಿ, ನೀಲಾ ಶಿಗ್ಲಿ, ಶಿವಲೀಲಾ, ಆಶಾ ಸಯ್ಯದ್, ನಂದಾ ಗುಳೇದಗುಡ್ಡ, ಬಸವರಾಜ ಮುರಗೋಡ ಸೇರಿದಂತೆ ಮುಂತಾದವರಿದ್ದರು.

ಇಂದು ಶ್ರೀ ಖಾಸ್ಗತರ, ವಿರಕ್ತಶ್ರೀಗಳ ಪುಣ್ಯಸ್ಮರಣೋತ್ಸವ

ತಾಳಿಕೋಟೆ: ಪಟ್ಟಣದ ಶ್ರೀ ಖಾಸ್ಗತ ಮಹಾ ಶಿವಯೋಗಿಗಳ 129ನೇ ಹಾಗೂ ಶ್ರೀ ವಿರಕ್ತ ಮಹಾಸ್ವಾಮಿಗಳವರ 11ನೇ ವರ್ಷದ ಪುಣ್ಯ ಸ್ಮರಣೋತ್ಸವವು ಇದೇ ದಿ. 12 ಶುಕ್ರವಾರರಂದು ಶ್ರೀ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರ ಘನ ಅಧ್ಯಕ್ಷತೆಯಲ್ಲಿ ಭಕ್ತಿಭಾವದೊಂದಿಗೆ ವಿಜೃಂಬಣೆಯಿಂದ ಜರುಗಲಿದೆ.

ಅಂದು ಶ್ರೀ ಖಾಸ್ಗತ ಮಠದಲ್ಲಿ ಶ್ರೀ ಖಾಸ್ಗತ ಮಹಾ ಶಿವಯೋಗಿಗಳ ಹಾಗೂ ವಿರಕ್ತ ಮಹಾ ಸ್ವಾಮಿಗಳ ಕತೃಗದ್ದುಗೆಗೆ ಮಹಾ ಭಿಷೇಕ ಬಿಲ್ವಾರ್ಚನೆ, ಪುಷ್ಪಾರ್ಚನೆ, ಮಹಾ ಮಂಗಳಾರತಿ ಕಾರ್ಯಕ್ರಮಗಳು ವೇ.ವಿಶ್ವನಾಥ ವಿರಕ್ತಮಠ, ವೇ.ಮಹಾಂತೇಶ ವಿರಕ್ತಮಠ ಅವರಿಗೆ ಜರುಗಲಿದೆ.

ಅಂದು ಸಾಯಂಕಾಲ 7 ಗಂಟೆಗೆ ಶ್ರೀಮಠದ ಶ್ರೀ ಗುರು ಭಿಕ್ಷೇಶ್ವರ ಸಭಾ ಮಂಟಪದಲ್ಲಿ ಧರ್ಮ ಸಭೆ ಜರುಗಲಿದ್ದು ಈ ಕಾರ್ಯಕ್ರಮದ ದಿವ್ಯ ಸಾನಿದ್ಯವನ್ನು ಇಂಗಳೇಶ್ವರ ವಿರಕ್ತಮಠದ ಶ್ರೀ ಚನ್ನಬಸವ ಮಹಾಸ್ವಾಮಿಗಳು, ಕೊಣ್ಣೂರ ಗುರುಮಠದ ಶ್ರೀ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು, ಕೊಡೇಕಲ್ಲ ದುರದುಂಡೇಶ್ವರಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳು, ನಾವದಗಿಯ ಶ್ರೀ ರಾಜಗುರು ರಾಜೇಂದ್ರ ಒಡೆಯ ಮಹಾಸ್ವಾಮಿಗಳು, ವಹಿಸಿರುವದು. ಈ ಸಮಯದಲ್ಲಿ ಪ್ರವಚನಕಾರರಾದ ಅಂಬಳನೂರಿನ ಶ್ರೀ ಸಂಗಮನಾಥ ದೇವರು, ಹಾಗೂ ಅತಿಥಿಗಳಾಗಿ ತಹಶಿಲ್ದಾರ ವಿನಯಾ ಹೂಗಾರ, ಪಿಎಸ್ಐ ಜ್ಯೋತಿ ಖೋತ್, ಆಗಮಿಸುವರು.

ಅಂದೇ ರಾತ್ರಿ 9 ಗಂಟೆಗೆ ಸಂಗೀತ ಸಂಜೆ ಕಾರ್ಯಕ್ರಮ ಜರುಗಲಿದ್ದು ಈ ಸಮಾರಂಭವನ್ನು ಶ್ರೀಮಠದ ಬಾಲಶಿವಯೋಗಿ ಶ್ರೀ ಸಿದ್ದಲಿಂಗ ದೇವರು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸುವರು.

ಕಾರ್ಯಕ್ರಮದ ಉದ್ಘಾಟನೆಯನ್ನು ನಿವೃತ್ತ ಸಂಗೀತ ಶಿಕ್ಷಕ ಪಂ.ಮಲ್ಲಿಕಾರ್ಜುನ ಭಜಂತ್ರಿ ಅವರು ನೇರವೇರಿಸುವರು. ಮುಖ್ಯ ಅತಿಥಿಗಳಾಗಿ ಕೆಂಭಾವಿ ಸಂಗೀತ ಶಿಕ್ಷಕರಾದ ಪಂ.ಬಸವರಾಜ ಭಂಟನೂರ, ಹಿರಿಯ ಪತ್ರಕರ್ತರಾದ ಜಿ.ಟಿ.ಘೋರ್ಪಡೆ, ಈಶ್ವರ ಬಡಿಗೇರ, ಪರಶುರಾಮ ಗುಬ್ಬೇವಾಡ, ಆಗಮಿಸುವರು.

ಇದೇ ಸಮಯದಲ್ಲಿ ತಬಲಾವಾದಕ ಪ್ರಭುಸ್ವಾಮಿ ಕೊಡೇಕಲ್ಲಮಠ, ಗಾಯಕರಾದ ವಿಶ್ವನಾಥ ವಿರಕ್ತಮಠ, ತಬಲಾವಾದಕ ಶಶಿಧರ ಬಿರಾದಾರ, ಚೆಳ್ಳಗೆಪ್ಪ ಭಜಂತ್ರಿ, ಗಾಯಕಿ ಶ್ರೀಮತಿ ರತ್ನಮ್ಮ ಕ್ವಾಟಿ ಅವರಿಗೆ ವಿರಕ್ತಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಗುವದಲ್ಲದೇ ಪತ್ರಕರ್ತರಾದ ಅಂಬಾಜಿ ಘೋರ್ಪಡೆ ಅವರಿಗೆ ವಿಶೇಷ ಸನ್ಮಾನ ಕಾರ್ಯಕ್ರಮ ಜರುಗಲಿದೆ. ಈ ಸಂಗೀತ ಸಂಜೆ ಕಾರ್ಯಕ್ರಮದಲ್ಲಿ ಧಾರವಾಡದ ಆಕಾಶವಾಣಿ ನಿಲಯದ ಕಲಾವಿದರಾದ ಪಂ.ಸದಾಶಿವ ಐಹೊಳಿ, ಅಂತರಾಷ್ಟ್ರೀಯ ತಬಲಾವಾದಕರಾದ ಶ್ರೀಧರ ಮಾಂಡ್ರೆ, ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ ಗಾಯಕಿಯರಾದ ಮೇಧಾ ಭಟ್ ಒಳಗೊಂಡು ಅನೇಕ ಕಲಾವಿದರು

ಮಹಿಳಾ ಸಂಘದಿಂದ ಬೋಳನ್ನವರ ದಂಪತಿಗಳಿಗೆ ಸತ್ಕಾರ

ಬೈಲಹೊಂಗಲ: ಸಾಧಕರಿಗೆ ನೀಡುವ ಪ್ರಶಸ್ತಿಗಳು ಇನ್ನಷ್ಟು ಸಮಾಜಮುಖಿ ಕೆಲಸ ಮಾಡಲು ಸ್ಫೂರ್ತಿ ಮತ್ತು ಪ್ರೇರಣೆಯಾಗಲಿದೆ ಎಂದು ಕಿತ್ತೂರು ಕರ್ನಾಟಕ ಸೇನೆಯ ಮಹಿಳಾ ಘಟಕ ತಾಲೂಕಾ ಅಧ್ಯಕ್ಷೆ ಸವಿತಾ ಆರ್.ಪಾಟೀಲ ಹೇಳಿದರು.

ಪಟ್ಟಣದ ಸಮಾಜ ಸೇವಕ, ಪ್ರಗತಿಪರ ರೈತರಾದ ಶಂಕರ ಸೋಮಪ್ಪ ಬೋಳನ್ನವರ ಅವರ ಸಾಧನೆ ಮತ್ತು ಸಮಾಜ ಸೇವೆ ಗುರುತಿಸಿ ಮಲೇಷಿಯಾ ದೇಶದಲ್ಲಿ ಅಂತರಾಷ್ಟ್ರೀಯ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಿದ ನಿಮಿತ್ತ ವಿದ್ಯಾನಗರ ಮಹಿಳಾ ಸಂಘದಿಂದ ಏರ್ಪಡಿಸಿದ್ದ ಸತ್ಕಾರ ಸಮಾರಂಭದಲ್ಲಿ ಅವರು ಮಾತನಾಡಿದರು.

ನಿಸ್ವಾರ್ಥದಿಂದ ಸಮಾಜ ಸೇವೆ ಮಾಡುತ್ತಿರುವ ಶಂಕರ ಬೋಳನ್ನವರ ಅವರ ಸೇವೆ ಅಪಾರವಾಗಿದೆ. ದೇಶದ ಬೆನ್ನೆಲುಬು ರೈತರ ಸಂಕಷ್ಟಕ್ಕೆ ಸ್ಪಂದಿಸುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯವಾಗಿದೆ. ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ ಕ್ಷೇತ್ರದಲ್ಲಿಯೂ ಗಣನೀಯ ಸೇವೆ ಸಲ್ಲಿಸುತ್ತಾ ಮುನ್ನಡೆದಿರುವುದು ಇತರರಿಗೂ ಮಾದರಿಯಾಗಿದ್ದಾರೆ. ಇವರ ಸಾಧನೆ, ಸಮಾಜ ಸೇವೆ ಗುರುತಿಸಿ ಮಲೇಷಿಯಾ ದೇಶದಲ್ಲಿ ಅಂತರರಾಷ್ಟ್ರೀಯ ಮಟ್ಟದ ಪ್ರಶಸ್ತಿ ಲಭಿಸಿರುವುದು ಜಿಲ್ಲೆಯ ಹೆಮ್ಮೆಯಾಗಿದೆ ಎಂದರು. ಇನ್ನೂ ಹೆಚ್ಚಿನ ಪ್ರಶಸ್ತಿ ದೊರೆಯಲೆಂದು ಶುಭ ಹಾರೈಸಿದರು.

ಇದೇ ವೇಳೆ ಸಮಾಜ ಸೇವಕ, ಪ್ರಗತಿಪರ ರೈತರಾದ ಶಂಕರ ಬೋಳನ್ನವರ ಹಾಗೂ ಪತ್ನಿ ಶ್ವೇತಾ ಬೋಳನ್ನವರ ದಂಪತಿಗಳಿಗೆ ಸತ್ಕರಿಸಲಾಯಿತು.

ಈ ಸಂದರ್ಭದಲ್ಲಿ ನೇತ್ರಾವತಿ ಹಿರೇಮಠ, ಭಾರತಿ ದೇಶನೂರ, ಸುಪ್ರೀಯಾ ಕಂಠಿ, ನೀಲಮ್ಮ ಪೂಜೇರ, ಶಿವಲೀಲಾ ಬಾನಿ, ಶೈಲಾ ಜಿರಳೆ, ಜ್ಯೋತಿ ತುರಮರಿ, ವಿಜಯಲಕ್ಷ್ಮೀ ಗಡಾದ ಹಾಗೂ ವಿದ್ಯಾನಗರ ಮಹಿಳಾ ಸಂಘದ ಸದಸ್ಯರು ಉಪಸ್ಥಿತರಿದ್ದರು.

ವಾಲಿಬಾಲ್ ಪಂದ್ಯಾವಳಿ: ಜಿಲ್ಲಾ ಮಟ್ಟಕ್ಕೆ ಆಯ್ಕೆ

ಮೂಡಲಗಿ: ಕರ್ನಾಟಕ ಸರ್ಕಾರ ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ಎನ್.ಎಸ್. ಎಫ್ ಪ್ರೌಢಶಾಲೆ ಕುಲಗೋಡದಲ್ಲಿ ಜರುಗಿದ ತಾಲೂಕು ಮಟ್ಟದ ಕ್ರೀಡಾಕೂಟದ ವಾಲಿಬಾಲ್ ಪಂದ್ಯದಲ್ಲಿ ತಾಲೂಕಿನ ಕಲ್ಲೋಳಿ ಪಟ್ಟಣದ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಶಿ.ಬ. ಪಾಟೀಲ ಪ್ರಾಥಮಿಕ ಶಾಲೆಯ ಬಾಲಕ ಹಾಗೂ ಬಾಲಕಿಯರ ಎರಡು ತಂಡದ ಆಟಗಾರರು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು ಬಾಲಕರ ತಂಡಕ್ಕೆ: ಪ್ರೇಮಸಾಯಿ ಬಡಿಗೇರ, ನಹೀಮ ನದಾಫ್, ತೇಜಸ್ ಬಡಿಗೇರ, ಹರೀಶ ಹೆಬ್ಬಾಳ, ಸನತ್ ಕಂಬಾರ, ಬಾಲಕಿಯರ ತಂಡಕ್ಕೆ: ಅಂಜನಾ ಚೌಗಲಾ, ಶ್ರೇಯಾ ಕಬಾಡಗಿ, ಸಂಜನಾ ಬಬಲಿ, ತೇಜಶ್ವಿನಿ ಕೋಟಗಿ, ಕಾವೇರಿ ಹುಲ್ಲೋಳಿ, ಈ ಕ್ರೀಡಾಪಟುಗಳಿಗೆ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಬಸವಗೌಡ ಶಿ. ಪಾಟೀಲ ಹಾಗೂ ಆಡಳಿತ ಮಂಡಳಿ ಸದಸ್ಯರು, ಮುಖ್ಯೋಪಾಧ್ಯಾಯ ರಾಜು ವಾಯ್. ಉಪ್ಪಾರ, ದೈಹಿಕ ಶಿಕ್ಷಣ ಶಿಕ್ಷಕ ಬಿ.ಎಂ. ಡಬ್ಬನವರ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

ಕುಲಗೋಡದಲ್ಲಿ ಜರುಗಿದ ತಾಲೂಕು ಮಟ್ಟದ ಕ್ರೀಡಾಕೂಟದ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಶಿ.ಬ. ಪಾಟೀಲ ಪ್ರಾಥಮಿಕ ಶಾಲೆಯ ಬಾಲಕ ಹಾಗೂ ಬಾಲಕಿಯರ ಎರಡು ತಂಡ ಆಯ್ಕೆ.

ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ

ಹಾವೇರಿ: ಜಿಲ್ಲಾ ಮಟ್ಟದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಪೂರ್ವಭಾವಿ ಸಿದ್ಧತಾ ಸಭೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆ.17 ರಂದು ಮಧ್ಯಾಹ್ನ 3-30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜರುಗಲಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಷ್ಟ್ರೀಯ ಅರಣ್ಯ ಹುತಾತ್ಮರ ಸ್ಮರಣ ದಿನ

ಹಾವೇರಿ: ಅರಣ್ಯ ಇಲಾಖೆ ಪ್ರಾದೇಶಿಕ ಮತ್ತು ಸಾಮಾಜಿಕ ಅರಣ್ಯ ವಿಭಾಗದಿಂದ ರಾಷ್ಟ್ರೀಯ ಅರಣ್ಯ ಹುತಾತ್ಮರ ಸ್ಮರಣ ದಿನ ಕಾರ್ಯಕ್ರಮ ಸೆ.11 ರಂದು ಬೆಳಿಗ್ಗೆ 11 ಗಂಟೆಗೆ ಕರ್ಜಗಿ ಪ್ರಾದೇಶಿಕ ಕಚೇರಿ ಆವರಣದಲ್ಲಿ ಜರುಗಲಿದೆ. ಪ್ರಧಾನ ಜಿಲ್ಲಾ ವ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿರಾದಾರ ದೇವಿಂದ್ರಪ್ಪ ಎನ್. ಅವರು ಉದ್ಘಾಟನೆ ನೆರವೇರಿಸಲಿದ್ದು, ಪ್ರಾದೇಶಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಅಬ್ದುಲ್ ಅಜೀಜ್ ಎ.ಶೇಖ್ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ರುಚಿ ಬಿಂದಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ, ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳಾದ ಶ್ರೀಶೈಲಜಾ ಎಚ್.ವಿ. ಸಾಮಾಜಿ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಚಂದ್ರಶೇಖಗೌಡ ಪಾಟೀಲ, ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್.ಎಚ್.ಜತ್ತಿ, ಕಾರ್ಯದರ್ಶಿ ಪಿ.ಎಸ್.ಹೆಬ್ಬಾರ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳಾದ ಕೆ.ಎಚ್. ಮಂಜುನಾಥ್, ಶಿವಾನಂದ ಪೂಜಾರ, ಸತೀಶ ಪೂಜಾರ ಹಾಗೂ ಖೇಮ್‌ಸಿಂಗ್ ರಾಥೋಡ್ ಅವರು ಭಾಗವಹಿಸಲಿದ್ದಾರೆ.

ಸೆ.15ವರೆಗೆ ಅವಧಿ ವಿಸ್ತರಿಣೆ

ಧಾರವಾಡ: 2025-26ನೇ ಸಾಲಿಗೆ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಡಾ.ಬಿ.ಆರ್.ಅಂಬೇಡ್ಕರ ಅವರ ಅನುಯಾಯಿಗಳನ್ನು ಮಹಾರಾಷ್ಟ್ರದ ನಾಗಪೂರದ ದೀಕ್ಷಾ ಭೂಮಿಯಲ್ಲಿ ಅಕ್ಟೋಬರ್ 2025ರ 2ನೇ ತಾರಿಖಿನಂದು ನಡೆಯಲಿರುವ ಪ್ರವರ್ತನಾ ದಿನಕ್ಕೆ (ವಿಜಯದಶಮಿ ದಿನದಂದು) ನಾಗಪೂರ ದೀಕ್ಷಾಭೂಮಿಗೆ 30.09.2025 ರಿಂದ 04.10.2025ರ ವರೆಗೆ ಜಿಲ್ಲೆಯಿಂದ ಪ್ರಯಾಣಿಸಿ ಹಿಂದಿರುಗಿ ಬರುವ ಸಂಬಂಧ ಬಸ್ ಹಾಗೂ ರೈಲು ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದ್ದು, ಅಂತೆಯೇ ದೀಕ್ಷಾ ಭೂಮಿಗೆ ಪ್ರವರ್ತನಾ ದಿನಕ್ಕೆ ಹೋಗುವ ಯಾತ್ರಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯ ವೈಬ್ ಸೈಟ್ ಲಿಂಕ್ https://swd.karnataka.gov.in ನ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು. ಸದರಿ ಅರ್ಜಿ ಸಲ್ಲಿಸುವ ದಿನಾಂಕವನ್ನು ಸೆಪ್ಟೆಂಬರ 15, 2025 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸಹಾಯಕ ನಿರ್ದೇಶಕರು ಗ್ರೇಡ್-1/2,ಸಮಾಜ ಕಲ್ಯಾಣ ಇಲಾಖೆ ಕಚೇರಿ ದೂರವಾಣಿ ಸಂಖ್ಯೆ ಜಿಲ್ಲಾ ಕಚೇರಿ (0836-2447201),(08370-284159) ನವಲಗುಂದ (08380-229937), ಕುಂದಗೋಳ (08304-290464) ಗಳಿಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಪನ್ಯಾಸಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಧಾರವಾಡ: ಕರ್ನಾಟಕ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿ, ಸ್ನಾತಕೋತ್ತರ ಕೇಂದ್ರಗಳಲ್ಲಿ ಮತ್ತು ಅಧೀನ ಮಹಾವಿದ್ಯಾಲಯಗಳಲ್ಲಿ ಸನ್ 2025-26ನೇ ಸಾಲಿಗೆ ಸ್ನಾತಕೋತ್ತರ ಪದವಿ ಕೋರ್ಸಗಳಿಗೆ ಖಾಲಿ ಹುದ್ದೆ ಅಥವಾ ಹೆಚ್ಚುವರಿ, ಸ್ವ-ಆರ್ಥಿಕ ಪದವಿ, ವಿಷಯಗಳ ಕಾರ್ಯಭಾರದ ಅಗತ್ಯತೆಗೆ ಅನುಗುಣವಾಗಿ ಬೋಧನೆ ಮಾಡಲು ಪೂರ್ಣಾವಧಿ, ಅರೆಕಾಲಿಕ ಅತಿಥಿ ಉಪನ್ಯಾಸಕರ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ಸೆಪ್ಟೆಂಬರ 20, 2025 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಈ ಮೂ ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ವಿಭಾಗಗಳ ಅಧ್ಯಕ್ಷರುಗಳು, ಆಡಳಿತಾಧಿಕಾರಿಗಳು, ಪ್ರಾಚಾರ್ಯರುಗಳನ್ನು ಖುದ್ದಾಗಿ ಅಥವಾ ಕ.ವಿ.ವಿ. ಅಂರ್ತಜಾಲ ತಿತಿತಿ.ಇಣಜ.ಚಿಛಿ.ಏಟಿ ಮುಂಖಾತರ ಪಡೆಯಬಹುದು ಎಂದು ಕರ್ನಾಟಕ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಧಾನ ಮಂತ್ರಿ ಸುರಕ್ಷಾ ಭೀಮಾ, ಜೀವನ ಜ್ಯೋತಿ ಬಿಮಾ ಯೋಜನೆ

ನೋಂದಣಿ ಅಭಿಯಾನಕ್ಕೆ ಸಿಇಓ ಕುರೇರ್ ಚಾಲನೆ

ಬಾಗಲಕೋಟೆ: ಗುಳೇದಗುಡ್ಡ ತಾಲೂಕಿನ ಕಟಗೇರಿ ಗ್ರಾಮ ಪಂಚಾಯತ ಸಭಾಭವನದಲ್ಲಿ ಹಮ್ಮಿಕೊಂಡ ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಮತ್ತು ಜೀವನ ಜ್ಯೋತಿ ಬಿಮಾ ಯೋಜನೆಗಳ ನೋಂದಣಿ ಅಭಿಯಾನಕ್ಕೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಚಾಲನೆ ನೀಡಿದರು.

ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಹಾಗೂ ಎನ್.ಆರ್.ಎಲ್.ಎಂ ಸಹಯೋಗದಲ್ಲಿ ಹಮ್ಮಿಕೊಂಡ ನೋಂದಣಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಯಡಿ ನೋಂದಾಯಿಸಿದಲ್ಲಿ ಆಕಸ್ಮಿಕ ಮರಣ ಅಥವಾ ಅಂಗವೈಕಲ್ಯಕ್ಕೆ ಒಳಗಾದವರಿಗೆ 2 ಲಕ್ಷ ರೂ.ಗಳವರೆಗೆ ವಿಮಾ ರಕ್ಷಣೆಯನ್ನು ಪಡೆಯಬಹುದಾಗಿದೆ. ವರ್ಷಕ್ಕೆ ಕೇವಲ 20 ರೂ.ಗಳ ಮಾತ್ರ ಹಣ ತುಂಬಿದರೆ ಸಾಕು ಎಂದರು.

ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ ಕೂಡಾ ಒಂದು ವಿಮೆ ಯೋಜನೆಯಾಗಿದ್ದು, ಇದು ಒಂದು ವರ್ಷದ ಅವಧಿಗೆ ಮಾತ್ರ ಇರುತ್ತದೆ. ಯೋಜನೆ ಮುಂದುವರಿಸಲು ಪ್ರತಿ ವರ್ಷ ನವೀಕರಿಸಿಕೊಳ್ಳಬೇಕಾಗುತ್ತದೆ. ಸದರಿ ಯೋಜನೆಗಳ ಸದುಪಯೋಗವನ್ನು ಜನರು ಪಡೆದುಕೊಂಡು ತಮ್ಮ ಕುಟುಂಬದ

ಭವಿಷ್ಯವನ್ನು ಭದ್ರಗೊಳಿಸಲು ಸಲಹೆ ನೀಡಿದರು.

ಅಧ್ಯಕ್ಷತೆಯನ್ನು ಕಟಗೇರಿ ಗ್ರಾಮ ಪಂಚಾಯತಿಯ ಅಧ್ಯಕ್ಷೆ ಸುಮಿತ್ರ ಹುಚ್ಚಪ್ಪ ದ್ಯಾವನ್ನವರ ವಹಿಸಿದ್ದರು. ಕಾರ್ಯಕ್ರಮದಲ್ಲಿ ಬಾಗಲಕೋಟೆ ಜಿಲ್ಲಾ ಸಹಕಾರಿ ಬ್ಯಾಂಕ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿದ್ದನಗೌಡ ನೀಲಪ್ಪನವರ, ಜಿ.ಪಂ ಪ್ರಭಾರಿ ಯೋಜನಾ ನಿರ್ದೇಶಕ ಶ್ಯಾಮಸುಂದರ ಕಾಂಬಳೆ, ಜಿಲ್ಲಾ ಪಂಚಾಯತ ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ, ಗುಳೇದಗುಡ್ಡ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಿಕಾರ್ಜುನ ಬಡಿಗೇರ, ನಬಾರ್ಡ ಜಿಲ್ಲಾ ವ್ಯವಸ್ಥಾಪಕ ಎನ್.ಎಸ್.ಸಾರಂಗಿ, ಜಿಲ್ಲಾ ಅಗ್ರಣಿ ಬ್ಯಾಂಕಿನ ವ್ಯವಸ್ಥಾಪಕ ರಾಜಶೇಖರ ಹೂಗಾರ, ಬಿಡಿಸಿಸಿ ಬ್ಯಾಂಕ್ ಕಟಗೇರಿ ಶಾಖೆಯ ಮ್ಯಾನೇಜರ ಸುಮಂಗಲಾ ಟಿ.ಎ ಸೇರಿದಂತೆ ಮಂಜುನಾಥ ರೆಡ್ಡಿ, ರಾಮನಗೌಡ ಗೌಡರ ಉಪಸ್ಥಿತರಿದ್ದರು.

ಸಾಲದ ಚೆಕ್ ವಿತರಣೆ

ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನಿಂದ ಕಟಗೇರಿ ಗ್ರಾಮದ ಇಂದಿರಾಗಾಂಧಿ ಸ್ವ-ಸಹಾಯ ಸಂಘಕ್ಕೆ 5.5 ಲಕ್ಷ ರೂ.ಗಳ ಸಾಲದ ಚೆಕ್‌ನ್ನು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ವಿತರಿಸಿದರು. ಈ ಸಂದರ್ಭದಲ್ಲಿ ಬಿಡಿಸಿಸಿ ಬ್ಯಾಂಕ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿದ್ದನಗೌಡ ನೀಲಪ್ಪನವರ ಸೇರಿದಂತೆ ಇತರರು ಇದ್ದರು.

ರೈತರ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯ

ವಿಜಯಪುರ: ರೈತರ ವಿವಿಧ ಬೇಡಿಕೆ ಈಡೇರಿಸಬೇಕೆಂದು ಒತ್ತಾಯಿಸಿ ಉತ್ತರ ಕರ್ನಾಟಕ ರಾಜ್ಯ ರೈತ ಸಂಘದಿಂದ ಪ್ರತಿಭಟನೆ ಹಮ್ಮಿಕೊಂಡು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಉತ್ತರ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷರಾದ ಶಂಕರಗೌಡ ಹಿರೇಗೌಡರ ಮಾತನಾಡಿ, ಬೆಳೆ ಪರಿಹಾರ ಆಗಸ್ಟ್ ತಿಂಗಳಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿಯಾದ ರೈತರಿಗೆ ಸರ್ಕಾರ ಪರಿಹಾರ ನೀಡಬೇಕು, ಬಂಡಿ ದಾರಿ ರಸ್ತೆ ಸುಧಾರಣೆ ಹಾದಿ ಸಮಸ್ಯೆ ,ಕಬ್ಬಿನ ವೈಜ್ಞಾನಿಕ ಬಂಬಲ ಬೆಲೆ, ರಾತ್ರಿ ಹೊತ್ತು ವಿದ್ಯುತ್ ಹಳೆಯ ರಾತ್ರಿ ಸಮಯದಲ್ಲಿ ತೋಟದ ಲೈನನ್ನು ರಾತ್ರಿ ನಿರಂತರ ವಿದ್ಯುತ್ ನೀಡಬೇಕು ,ಅಕ್ರಮ-ಸಕ್ರಮ ಯೋಜನೆ ಪುನಾ ಜಾರಿಗೆ ತರುವುದು ಶೀಘ್ರ ಸಂಪರ್ಕ ಯೋಜನೆಯಿಂದ ರೈತರಿಗೆ ಆರ್ಥಿಕ ಸಂಕಷ್ಟ ಎದುರಾಗುತ್ತದೆ, ಹಳೆಯ ಆರ್ ಆರ್ ನಂಬರ್ 10000ರೂಪಾಯಿ ಮತ್ತು ಹೊಸ ಆರ್ ಆರ್ ನಂಬರ್ 15000ರೂಪಾಯಿ ಶುಲ್ಕ ಪಾವತಿಸುವ ಆದೇಶ ಹಿಂಪಡೇಯಬೇಕು ,ವೈಶಾಲಿ ವಿಂಡ್ ಪವರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ಗುಲಾಬ್ ರಾಮಚಂದ್ರ ಚವಾಣ್ ಕುಮಟಗಿ ಗ್ರಾಮದ ರೈತನಿಗೆ ದ್ರಾಕ್ಷಿ ಬೆಳೆಯ ನಷ್ಟದ ಪರಿಹಾರ ನೀಡದಿದ್ದ ವಿಂಡ್ ಪವರ್ ಕಂಪನಿಯ ವಿರುದ್ಧ ಹೋರಾಟ ರೈತರ ಬೆಳೆ ಸಾಲ ಮನ್ನಾ ಜೋಡತ್ತಿನ ರೈತರಿಗೆ ಪ್ರೋತ್ಸಾಹ ಧನ ಜಾರಿಗೆ ತರಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಗೌರವಾಧ್ಯಕ್ಷರಾದ ಸಿದ್ರಾಮ ಜಂಗಮಶೇಟ್ಟಿ, ಜಿಲ್ಲಾಗೌರವಾಧ್ಯಕ್ಷ ಬಾಪುಗೌಡ ಬಿರಾದಾರ, ಜಿಲ್ಲಾ ಉಪಾಧ್ಯಕ್ಷರು ಗುರಣ್ಣಗೌಡ ಬಿರಾದಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗಿರೀಶ ಹಿರೇಮಠ, ಸರಸ್ವತಿ ಬಿರಾದಾರ, ವಾಣಿಶ್ರೀ ಮುಳವಾಡ, ನಗರ ಘಟಕದ ಅಧ್ಯಕ್ಷ ದಾದಾಪೀರ ಮುಜಾವರ, ರೈತ ಚಿಂತಕರಾದ ಫಯಾಜ ಕಲಾದಗಿ, ತಿಕೋಟ ತಾಲೂಕಿನ ಅಧ್ಯಕ್ಷರು ಈರಪ್ಪ ಕನ್ನಾಳ, ದೇವರಹಿಪ್ಪರಗಿಯ ತಾಲ್ಲೂಕಿನ ಅಧ್ಯಕ್ಷರು ರಾಮು ದೇಸಾಯಿ, ಸಿಂದಗಿ ತಾಲ್ಲೂಕಾಧ್ಯಕ್ಷರಾದ ದಶರಥಸಿಂಗ ರಜಪೂತ, ಆಲಮೇಲ ತಾಲೂಕಿನ ಅಧ್ಯಕ್ಷರು ಮಹೀಬೂಬಸಾಬ ಸೌದಾಗರ, ತೋರವಿ ಗ್ರಾಮ ಘಟಕ ಅಧ್ಯಕ್ಷರು ದಸ್ತಗಿರ ಶ್ಯಾನವಾಲೆ, ಮುಳಸಾವಳಗಿ ಗ್ರಾಮ ಘಟಕದ ಅಧ್ಯಕ್ಷರು ಶರಣಗೌಡ ಬಿರಾದಾರ, ತೋರವಿ ರೈತ ಮುಖಂಡರು ಬೀರಪ್ಪ ಜುಮನಾಳ, ಬಸುಗೌಡ ಹೋನುಟಗಿ, ಯಲ್ಲಾಲಿಂಗ ನಾಲತ್ವಾಡ, ಶೀವು ಯಾಳಗಿ, ನರೇಂದ್ರ ಇಂಡಿ, ಗುರು ಜಡಗೊಂಡ, ರಾವುತ ಅಗಸರ, ರಮೇಶ ಇಳಗೇರ ಮುಂತಾದವರು ಇದ್ದರು.

ಶಿಕ್ಷಕರ ಹೆಚ್ಚುವರಿ ಕೌನ್ಸಲಿಂಗ್

ಹಾವೇರಿ: ಕಳೆದ 2024-25ನೇ ಸಾಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರುಗಳ ಹೆಚ್ಚುವರಿ ಕೌನ್ಸಿಲಿಂಗ್ ಪ್ರಕ್ರಿಯೆಗಳು ಸೆ.11 ಹಾಗೂ 12 ರಂದು ಜರುಗಲಿದೆ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ. ದಿನಾಂಕ 11-09-2025 ರಂದು ಪ್ರಾಥಮಿಕ ವಿಭಾಗ ಹಾಗೂ ದಿನಾಂಕ 12-09-2025 ರಂದು ಪ್ರೌಢ ಶಾಲಾ ವಿಭಾಗದ ಹೆಚ್ಚುವರಿ ಕೌನ್ಸಿಲಿಂಗ್ ಪ್ರಕ್ರಿಯೆಗಳನ್ನು ಜಿಲ್ಲಾಡಳಿತ ಭವನದ ಉಪ ನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ "ಎ" ಬ್ಲಾಕ್ ಮೊದಲನೇ ಹಂತ ಕೊಠಡಿ ನಂಬರ್-11 ರಲ್ಲಿ ಬೆಳಿಗ್ಗೆ 10-00 ಗಂಟೆಗೆ ಆಯೋಜಿಸಲಾಗಿದೆ. ಹೆಚ್ಚುವರಿ ಪಟ್ಟಿಯಲ್ಲಿರುವ ಶಿಕ್ಷಕರುಗಳು ಕಡ್ಡಾಯವಾಗಿ ಸಮಯಕ್ಕೆ ಸರಿಯಾಗಿ ಹಾಜರಾಗಲು ಕೋರಲಾಗಿದೆ. ಆದ್ಯತೆ ಹಾಗೂ ವಿನಾಯಿತಿ ಬಯಸುವ ಶಿಕ್ಷಕರು ಮೂಲ ದಾಖಲೆಗಳೊಂದಿಗೆ ಕೌನ್ಸಿಲಿಂಗ್‌ನಲ್ಲಿ ಹಾಜರಾಗಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಬಾಲ್ಯ ವಿವಾಹ ನಡೆಯದಂತೆ ಸೂಕ್ತ ಕ್ರಮ ಕೈಗೊಳ್ಳಿ

ಕೊಪ್ಪಳ: ರಾಜ್ಯದಲ್ಲಿ ಇತ್ತೀಚೆಗೆ ಬಾಲಗರ್ಭಿಣಿ ಪ್ರಕರಣಗಳು ವರದಿಯಾಗಿದ್ದು, ಕೊಪ್ಪಳ ಜಿಲ್ಲೆಯಲ್ಲಿ ಯಾವುದೇ ರೀತಿಯ ಬಾಲ್ಯ ವಿವಾಹ ಮತ್ತು ಬಾಲಗರ್ಭಿಣಿ ಪ್ರಕರಣಗಳು ನಡೆಯದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಬುಧವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಬಾಲ್ಯ ವಿವಾಹ ತಡೆ ಮತ್ತು ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಾಲ್ಯ ವಿವಾಹ ಮತ್ತು ಬಾಲಗರ್ಭಿಣಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಾನ್ಯ ಮುಖ್ಯ ಮಂತ್ರಿಗಳು, ಇತ್ತೀಚೆಗೆ ಜಿಲ್ಲಾಧಿಕಾರಿಗಳು ಮತ್ತು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಸಭೆಯನ್ನು ತೆಗೆದುಕೊಂಡು, ಸೂಕ್ತ ನಿರ್ದೇಶನಗಳನ್ನು ನೀಡಿದ್ದಾರೆ ಹಾಗೂ ಬಾಲ್ಯ ವಿವಾಹ ಮತ್ತು ಬಾಲಗರ್ಭಿಣಿ ಪ್ರಕರಣಗಳನ್ನು ತೆಡೆಗಟ್ಟಲು ಜನ ಸಮುದಾಯದಲ್ಲಿ ವ್ಯಾಪಕ ಪ್ರಚಾರ ಮತ್ತು ಜಾಗೃತಿ ಮೂಡಿಸಲು ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಕಾವಲು ಸಮಿತಿ ಸಭೆಗಳನ್ನು ಕೈಗೊಳ್ಳಬೇಕು. ಈ ಸಭೆಗಳಲ್ಲಿ ಎಲ್ಲಾ ಪ್ರೌಢ ಶಾಲೆ, ಕಾಲೇಜುಗಳು, ಮಹಿಳಾ ಸ್ವ ಸಹಾಯ ಸಂಘ ಸಂಸ್ಥೆಗಳು ಮತ್ತು ಆಯಾ ಊರಿನ ಸಾರ್ವಜನಿಕರನ್ನು ಸೆರಿಸಿ, ಅಲ್ಲಿ ಬಾಲ್ಯ ವಿವಾಹ ಕಾನೂನು ಬಾಹಿರ ಎಂಬುದರ ಕುರಿತು ಚರ್ಚೆ ಮಾಡಬೇಕು. ಎಲ್ಲರೂ ಒಳಗೊಂಡಂತೆ ಜಾಗೃತಿ ಜಾಥದ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಿ ಎಂದರು.

ಸಮಗ್ರ ಶಿಕ್ಷಣ ಅಭಿಯಾನದಡಿ ಪ್ರತಿ

ಪ್ರೌಢಶಾಲೆಯಲ್ಲಿ ಬಾಲ್ಯ ವಿವಾಹ ಬಗ್ಗೆ ಜಾಗೃತಿ ಮೂಡಿಸಲು ಅನುದಾನ ಇದೆ. ಅದನ್ನ ಬಳಸಿಕೊಂಡು ಕಾನೂನು ಸೇವಾ ಪ್ರಾಧಿಕಾರದ ಸಹಯೋದಲ್ಲಿ ಬಾಲ್ಯ ವಿವಾಹ ತಡೆಗೆ ಜಾಗೃತಿ ಮೂಡಿಸುವಂತೆ ಶಿಕ್ಷಣ ಇಲಾಖೆಯಿಂದ ಕ್ರಮ ಕೈಗೊಳ್ಳಬೇಕು. ತಾಲ್ಲೂಕು ಹಂತದಲ್ಲಿ ತಹಶಿಲ್ದಾರರ ನೇತೃತ್ವದಲ್ಲಿರುವ ಬಾಲ್ಯ ವಿವಾಹ ತಡೆ ಸಮಿತಿಗಳು ತಮ್ಮ ವ್ಯಾಪ್ತಿಯಲ್ಲಿ ಜಾಗೃತಿ ಜಾಥ ಮತ್ತು ಇತರೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜಿಲ್ಲೆಯಾದ್ಯಂತ ಯಾವುದೇ ರೀತಿಯ ಬಾಲ್ಯವಿವಾಹಗಳು ನಡೆಯಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಇಲಾಖೆ ಹಾಗೂ ಶಿಕ್ಷಣ ಇಲಾಖೆಯವರು ಸಂಜೀವಿನಿ ಮತ್ತು ಎನ್.ಆರ್.ಎಲ್.ಎಮ್. ಮಹಿಳಾ ಸ್ವಸಹಾಯ ಸಂಘಗಳು ಅಥವಾ ಇತರೆ ಸಂಘಗಳನ್ನು ಸೇರಿಸಿಕೊಂಡು ಪ್ರೌಢ ಶಿಕ್ಷಣ ಮತ್ತು ಪಿಯು ಶಿಕ್ಷಣ ಹಂತದಿಂದ ಹೋರ ಉಳಿದ ಹೆಣ್ಣು ಮಕ್ಕಳನ್ನು ಪತ್ತೆ ಮಾಡಿ, ಅವರಲ್ಲಿ ಬಾಲ್ಯ ವಿವಾಹ ಏನಾದರೂ ಜರುಗಿದೆಯೇ ಅಥವಾ ಬಾಲ್ಯ ವಿವಾಹ ಮಾಡಲು ಪ್ರಯತ್ನ ಮಾಡಲಾಗುತ್ತಿದೆಯೇ ಎಂಬುವುದನ್ನು ಪರಿಶೀಲನೆ ಮಾಡಬೇಕು. ಯಾವುದೇ ರೀತಿಯ ಬಾಲ್ಯ ವಿವಾಹ ಅಥವಾ ಬಾಲಗರ್ಭಿಣಿ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣವೇ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕ್ರಮ ವಹಿಸಬೇಕು. ಆಡಳಿತ ವ್ಯವಸ್ಥೆ ಜಾಗರುಕವಾಗಿದೆ ಎಂದಾಗ ಮಾತ್ರ ಜನ ಬಾಲ್ಯ ವಿವಾಹ ಮಾಡುವುದನ್ನು ನಿಲ್ಲಿಸಬಹುದು. ಜಿಲ್ಲೆಯ ಎಲ್ಲಾ ದೇವಸ್ಥಾನ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಬಾಲ್ಯ ವಿವಾಹ ಕಾನೂನು ಬಾಹಿರ ಅಪರಾಧ ಎಂದು ಗೋಡೆ ಬರಹವನ್ನು ಬರೆಸುವಂತೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಸಂಸ್ಥೆಗಳು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ್ ಅವರು ಮಾತನಾಡಿ, ಬಾಲ್ಯವಿವಾಹವು ಶಿಕ್ಷಾರ್ಹ ಅಪರಾದವಾಗಿದ್ದು, ಪೊಲೀಸ್ ಅಧಿಕಾರಿಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ನಡೆದ ಬಾಲ್ಯವಿವಾಹದ ಮಾಹಿತಿಯನ್ನು ಗಮನಿಸಿ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ಬಾಲ್ಯವಿವಾಹ ಅಧಿನಿಯಮದಡಿ ತಾನಾಗಿಯೇ ಕ್ರಮ ಕೈಗೊಳ್ಳಬೇಕು. ಇದರ ಜೊತೆಗೆ ಬಾಲ್ಯವಿವಾಹ ನಿಷೇಧ ಅಧಿಕಾರಿಗಳು ಬಾಲ್ಯವಿವಾಹ ನಿಷೇಧ ಕಾಯ್ದೆಯನ್ನು ಪರಿಣಾಮ ಕಾರಿಯಾಗಿ ಅನುಷ್ಠಾನ ಮಾಡಬೇಕು. ಶಾಲೆಗಳಲ್ಲಿ ಹುಡುಗ ಹುಡುಗಿಗೆ ಗಿಫ್ಟ್ ಕೋಡುತ್ತಾನೆ. ಅಲ್ಲಿಂದ ಕೆಟ್ಟ ಅವ್ಯಸಗಳು ರೂಡಿಯಾಗುತ್ತವೆ. ಅಂತಹ ಚಟುವಟಿಕೆಗಳನ್ನು ಅಲ್ಲೆ ನಿಯಂತ್ರಣ ಮಾಡುವುದು ಸೂಕ್ತ. ಈ ಬಗ್ಗೆ ಹಾಸ್ಟೆಲ್ ವಾರ್ಡನ್‌ಗಳು ಮತ್ತು ಶಾಲಾ ಶಿಕ್ಷಕರಿಗೆ ಕ್ರಮ ಕೈಗೊಳ್ಳಲು ತಿಳಿಸಬೇಕು ಎಂದು ಸೂಚನೆ ನೀಡಿದರು.

ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಮಾತನಾಡಿ, ಬಾಲ್ಯ ವಿವಾಹ ನಡೆಯಲಿಕ್ಕೆ ಮುಖ್ಯ ಪಾತ್ರ ನೀಡುವುದು ಪ್ರೌಢಶಾಲಾ ಹಂತದಲ್ಲಿಯೇ ಆಗಿದ್ದು, ಎಸ್.ಎಸ್.ಎಲ್.ಸಿ.ಯಲ್ಲಿ ಪಾಸ್ ಆದರೆ ಮುಂದಿನ ಶಿಕ್ಷಣ ಕೊಡಿಸಲು ಪಾಲಕರು ಮುಂದಾಗುತ್ತಾರೆ. ಒಂದು ವೇಳೆ ಆ ಹೆಣ್ಣು ಮಗಳು ಫೇಲ್ ಆದರೆ ಪಾಲಕರು ವಿವಾಹ ಮಾಡಲಿಕ್ಕೆ ಮುಂದಾಗುತ್ತಾರೆ. ಈ ಹಿನ್ನೆಲೆಯಲ್ಲಿ ಪ್ರೌಢಶಾಲಾ ಶಿಕ್ಷಣ ಹಂತದಲ್ಲಿ ಎಲ್ಲಾ ಮಕ್ಕಳಿಗೆ ವಿಶೇಷವಾಗಿ ಹೆಣ್ಣುಮಕ್ಕಳಿಗೆ ಉತ್ತಮ ರೀತಿಯಲ್ಲಿ ಶಿಕ್ಷಣ ನೀಡಿ, ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಮಕ್ಕಳು ಫೆಲ್ ಆಗದಂತೆ ನೋಡಿಕೊಳ್ಳುವ ಮೂಲಕ ಶಿಕ್ಷಣ ಇಲಾಖೆಯಿಂದ ಅಗತ್ಯ ಕ್ರಮ ಕೈಗೊಂಡು ಬಾಲ್ಯ ವಿವಾಹಗಳನ್ನು ತಡೆಗಟ್ಟಬೇಕು. ಇದರ ಜೊತೆಗೆ ಶಾಲೆಯಿಂದ ಹೊರಗೆ ಉಳಿದ ಮಕ್ಕಳನ್ನು ಪತ್ತೆ ಮಾಡಿ, ಅವರಿಗೆ ಮರಳಿ ಶಾಲೆಗೆ ಕರೆತರಬೇಕು. ಪ್ರಮುಖವಾಗಿ ಹೆಣ್ಣು ಮಕ್ಕಳು ಶಿಕ್ಷಣದಿಂದ ಹೊರಗುಳಿಯದಂತೆ ನೋಡಿಕೊಳ್ಳಿ. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಿಂದ ಜಿಲ್ಲಾ ಹಂತದವರೆಗಿನ ಎಲ್ಲಾ ಇಲಾಖೆಗಳು ಮತ್ತು ಕಛೇರಿಗಳು ಪತ್ರ ವ್ಯವಹಾರ ಮಾಡುವಾಗ ಕೆಳಗೆ ಬಾಲ್ಯ ವಿವಾಹ ನಿಷೇಧಿಸಲಾಗಿದೆ ಎಂದು ಬರೆಯುವುದನ್ನ ಕಡ್ಡಾಯ ಮಾಡಿಕೊಳ್ಳಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ. ರಾಮತ್ನಾಳ್ ಅವರು ಮಾತನಾಡಿ, ಇನ್ನು ಕೆಲವು ಗ್ರಾಮದಲ್ಲಿ ಕಾವಲು ಸಮಿತಿಗಳು ರಚನೆ ಯಾಗಿಲ್ಲ. ಬಹಳ ತುರ್ತಾಗಿ ಈ ಸಮಿತಿಗಳನ್ನು ರಚಿಸಬೇಕು. ಜಿಲ್ಲಾಧಿಕಾರಿಗಳು ಹೇಳಿದಂತೆ ಜಿಲ್ಲೆಯಾದ್ಯಂತ ಸೆ. 22ಕ್ಕೆ ಜಾಗೃತಿ ಜಾಥವನ್ನು ಮಾಡುವ ಮೂಲಕ ಬಾಲ್ಯ ವಿವಾಹಗಳನ್ನು ನಿಯಂತ್ರಣ ಮಾಡಲು ಎಲ್ಲಾರು ಒಟ್ಟಾಗಿ ಸೇರಿ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಹೇಮಂತ ಕುಮಾರ್, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಜಿ.ಪಂ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ ಶೆಟ್ಟಪ್ಪನವರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಟಿ.ಲಿಂಗರಾಜು, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಂತಸ್ವಾಮಿ ಪೂಜಾರ್

13ರಂದು ಹಾಸ್ಯ ಕಾರ್ಯಕ್ರಮ

ಬೆಳಗಾವಿ: ಹಾಸ್ಯಕೂಟ ಬೆಳಗಾವಿ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 13 ಶನಿವಾರದಂದು ಸಾಯಂಕಾಲ 4–30 ಕ್ಕೆ ನಗರದ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ "ಮಾಧ್ಯಮ ವೃತ್ತಿಯಲ್ಲಿಯ ಮೋಜಿನ ಪ್ರಸಂಗಗಳು" ಎಂಬ ಹಾಸ್ಯ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ಹಿರಿಯ ಪತ್ರಕರ್ತರಾದ ಎಲ್. ಎಸ್. ಶಾಸ್ತ್ರಿಯವರು ಕಾರ್ಯಕ್ರಮಕ್ಕೆ ಚಾಲನೆಯನ್ನು ನೀಡಲಿದ್ದು ಅಧ್ಯಕ್ಷತೆಯನ್ನು ಹಿರಿಯ ಕವಿಗಳಾದ ಪ್ರೊ. ಎಂ. ಎಸ್. ಇಂಚಲ ವಹಿಸಿಕೊಂಡಿದ್ದಾರೆ. ಪ್ರಾಯೋಜಕತ್ವವನ್ನು ಹಿರಿಯ ಪತ್ರಿಕಾ ವರದಿಗಾರರಾದ ಕೀರ್ತಿಶೇಖರ ಕಾಸರಗೋಡು ಅವರು ವಹಿಸಿಕೊಂಡಿದ್ದು ವಪ್ರಾಸ್ತಾವಿಕ ನುಡಿಯನ್ನು ಹಾಸ್ಯಕೂಟ ಸಂಚಾಲಕ, ವರದಿಗಾರ ಗುಂಡೇನಟ್ಟಿ ಮಧುಕರ ಆಡಲಿದ್ದಾರೆ. ಮಾಧ್ಯಮದಲ್ಲಿಯ. ಮಜಾ ಪ್ರಸಂಗಗಳನ್ನು ಹಿರಿಯ ವರದಿಗಾರರಾದ ಸುಭಾಸ ಕುಲಕರ್ಣಿ, ಮುರುಗೇಶ ಶಿವಪೂಜಿ, ಹೃಷಿಕೇಶ ಬಹಾದ್ದೂರ ದೇಸಾಯಿ, ರವೀಂದ್ರ ಉಪ್ಪಾರ, ಮೆಹಬೂಬ ಮಕಾನದಾರ ಹಂಚಿಕೊಳ್ಳಲ್ಲಿದ್ದಾರೆ. ಹಾಸ್ಯಕೂಟ ಕಲಾವಿದ ಜಿ. ಎಸ್. ಸೋನಾರ ನಿರೂಪಿಸಲಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಹಾಸ್ಯಾಸಕ್ತರು ಆಗಮಿಸುವಂತೆ ಸಾಹಿತ್ಯ ಭವನದ ಗೌರವ ಕಾರ್ಯದರ್ಶಿ ರಾಮಚಂದ್ರ ಕಟ್ಟಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

ಧಾರವಾಡ: ಮೀನುಗಾರಿಕೆ ಇಲಾಖೆಯ 2025–26 ನೇ ಸಾಲಿಗೆ ಜಿಲ್ಲಾವಲಯ, ರಾಜ್ಯ ವಲಯದ ಮತ್ತು ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆ ಯಡಿಯಲ್ಲಿ ಫಲಾನುಭವಿ ಆಧಾರಿತ ಯೋಜನೆಗಳಾದ ಭಾವಿ ಹೊಂಡಗಳಿಗೆ ಮೀನುಮರಿ ಸರಬರಾಜು, ಗ್ರಾಸ್ ಕಾರ್ಪ್ ಮೀನುಮರಿ ಬಿತ್ತನೆಗೆ ಸಹಾಯ, ಮೀನುಗಾರಿಕೆ ಸಲಕರಣೆಗಳ ಕಿಟ್ ಯೋಜನೆ, ಮೀನು ಮಾರಾಟಕ್ಕೆ ದ್ವಿವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಸಹಾಯಧನ, ಮೀನು ಕೃಷಿ, ಮೀನುಮರಿ ಪಾಲನಾ ಕೊಳ, ನಿರ್ಮಾಣಕ್ಕೆ ಮತ್ತು ಹೂಡಿಕೆ ವೆಚ್ಚಗಳಿಗೆ ಸಹಾಯಧನ, ಮೀನುಮರಿ ಖರೀದಿಸಲು ಸಹಾಯಧನ, ನಾಲ್ಕು ಚಕ್ರದ ಮೀನು ಸಾಗಾಟ ವಾಹನ ಖರೀದಿಸಲು ಸಹಾಯಧನ ಇತ್ಯಾದಿ ಯೋಜನೆಗಳ ಪ್ರಯೋಜನೆ ಪಡೆಯಲು ಆನ್–ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವ್ಯಕ್ತಿ ಅಥವಾ ಮೀನುಗಾರರ ಸಹಕಾರಿ ಸಂಘದ ಸದಸ್ಯರು ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 08, 2025 ರೊಳಗಾಗಿ https://dharwad.nic.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬೇಕು. ಯೋಜನೆಗಳ ವಿವರ, ನಿಯಮಗಳು, ಅನುದಾನದ ವಿವರ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆಯ ವಿಧಾನ ಇತ್ಯಾದಿ ವಿವರಗಳನ್ನು ಇಲಾಖಾ ವೆಬ್‌ಸೈಟ್ https://fisheries.karnataka.gov.in ನಲ್ಲಿ ಒದಗಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ–0836–2447416, 9845367265, 9448907603. ಮೀನುಗಾರಿಕೆ ಸಹಾಯವಾಣಿ–8277200300. ಗೆ ಅಥವಾ ಆಯಾ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದು ಎಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೊಸ ನ್ಯಾಯಬೆಲೆ ಅಂಗಡಿ ಮಂಜೂರಿಗೆ ಅರ್ಜಿ

ಬಾಗಲಕೋಟೆ: ಬಾಗಲಕೋಟೆ ತಾಲೂಕಿನ ಮುಗಳೊಳ್ಳಿ, ಬೇವೂರ, ಹೊನ್ನಾಕಟ್ಟಿ ಹಾಗೂ ಬಾದಾಮಿ ತಾಲೂಕಿನ ಬೇಲೂರ ಗ್ರಾಮಗಳಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿ ಸ್ಥಾಪಿಸಲು ಮಂಜೂರಾತಿ ನೀಡುವ ಸಲುವಾಗಿ ಅರ್ಹ ಸಂಘ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಸಹಕಾರಿ ಸಂಘವು ಕನಿಷ್ಟ 3 ವರ್ಷಗಳಿಂದ ಚಾಲನೆಯಲ್ಲಿದ್ದು, ಹಿಂದಿನ ಎರಡು ವರ್ಷಗಳಲ್ಲಿ ಕನಿಷ್ಟ 2 ಲಕ್ಷ ರೂ. ಗಳ ನಿರಂತರ ಬ್ಯಾಂಕ್ ಬ್ಯಾಲೆನ್ಸ್ ಹೊಂದಿರಬೇಕು. ವಿಕಲಚೇತನ ಹಾಗೂ ತೃತೀಯ ಲಿಂಗದ ವ್ಯಕ್ತಿಗಳನ್ನು ಹೊರತುಪಡಿಸಿ ಖಾಸಗಿ ವ್ಯಕ್ತಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿರುವದಿಲ್ಲ. ಕನಿಷ್ಟ ಎಸ್. ಎಸ್.ಎಲ್.ಸಿ ಪಾಸಾಗಿರಬೇಕು. ಅರ್ಜಿಗಳನ್ನು ಆಯಾ ತಾಲೂಕಾ ತಹಶೀಲ್ದಾರರಿಂದ ಪಡೆದುಕೊಂಡು ಭರ್ತಿ ಮಾಡಿದ ನಮೂನೆ ಎ ರಲ್ಲಿ ನಿಗಧಿಪಡಿಸಿದ ದಾಖಲೆಗಳೊಂದಿಗೆ ಅಕ್ಟೋಬರ 8 ರೊಳಗಾಗಿ ಆಯಾ ತಾಲೂಕಾ ತಹಶೀಲ್ದಾರ ಕಚೇರಿಗೆ ಸಲ್ಲಿಸುವಂತೆ ಆಹಾರ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

16ರಂದು ಮುಧೋಳದಲ್ಲಿ ವಸ್ತು ಪ್ರದರ್ಶನ, ಉದ್ಯೋಗ ಮೇಳ

ಬಾಗಲಕೋಟೆ: ಮುಧೋಳ ನಗರದ ದಾನಮ್ಮದೇವಿ ದೇವಸ್ಥಾನದ ಆವರಣದಲ್ಲಿ ಸೆಪ್ಟೆಂಬರ 16 ರಂದು ವಸ್ತು ಪ್ರದರ್ಶನ ಮತ್ತು ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಇತ್ತೀಚೆಗೆ ಜರುಗಿದ ಜಿಲ್ಲಾ ಕೌಶಲ್ಯ ಮಿಷನ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೋವನೋಪಾಯ ಇಲಾಖೆ ಹಾಗೂ ಆರ್.ಬಿ.ತಿಮ್ಮಾಪೂರ ಫೌಂಡೇಶನ್ ಸಹಯೋಗದೊಂದಿಗೆ ಉದ್ಯೋಗ ಮೇಳ ಆಯೋಜಿಸಲಾಗುತ್ತಿದ್ದು, ಸದರಿ ಮೇಳದಲ್ಲಿ 30ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿವೆ. ಮೇಳದಲ್ಲಿ ವಿವಿಧ ಇಲಾಖೆಗಳ ಸೇವೆ ಹಾಗೂ ಪಂಚ ಗ್ಯಾರಂಟಿ ಯೋಜನೆಗಳ ಕುರಿತ ಮಾಹಿತಿ ಮತ್ತು ವಸ್ತು ಪ್ರದರ್ಶನ ಸಹ ಏರ್ಪಡಿಸಲಾಗುತ್ತಿದೆ ಎಂದರು.

ಉದ್ಯೋಗ ಮೇಳವು ಅಂದು ಬೆಳಗ್ಗೆ 9.30 ರಿಂದ ಸಂಜೆ 4 ಗಂಟೆವರೆಗೆ ನಡೆಯಲಿದ್ದು, ಎಸ್. ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಪದವಿಧರರು, ಸ್ನಾತಕೋತ್ತರ ಹಾಗೂ ವೃತ್ತಿಪರ ಪದವೀಧರರು ಭಾಗವಹಿಸಬಹುದಾಗಿದೆ.

ಕೌಶಲ್ಯ ತರಬೇತಿ

ಯುವನಿಧಿ ಯೋಜನೆಯಡಿ ನೋಂದಾಯಿಸಿ ನೇರ ನಗದು ವರ್ಗಾವಣೆ ಮೂಲಕ ನಿರಂತರವಾಗಿ 6 ತಿಂಗಳು ನಿರುದ್ಯೋಗ ಭತ್ಯೆ ಪಡೆದಿರುವ ಫಲಾನುಭವಿಗಳ ಕೌಶಲ್ಯ ತರಬೇತಿ ಮತ್ತು ಉದ್ಯಮ ಶೀಲತೆ ತರಬೇತಿಯನ್ನು ಪಡೆಯಲು ಪೋರ್ಟಲ್ http://kaushalkar.karnataka.gov.in/ ನಲ್ಲಿ ಕಡ್ಡಾಯವಾಗಿ ನೋಂದಾ ಯಿಸುವಂತೆ ಹಾಗೂ ಸಮೀಪದ ಸರ್ಕಾರಿ ಐಟಿಐಗಳಲ್ಲಿ ತರಬೇತಿ ಪಡೆಯಬಹುದಾಗಿದೆ.

ಅಭ್ಯರ್ಥಿಗಳು ನೋಂದಣಿ ಸಹ ಮಾಡಿಕೊಳ್ಳಬಹುದು. ಮೇಳದಲ್ಲಿ 18 ರಿಂದ 35 ವರ್ಷದೊಳಗಿನ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಪಾಲ್ಗೊಳ್ಳಬಹುದಾಗಿದೆ. ಅಭ್ಯರ್ಥಿಗಳು ಮೇಳಕ್ಕೆ ಬರುವಾಗ ಅಂಕಪಟ್ಟಿ, ಆಧಾರ ಕಾರ್ಡ ಮತ್ತು ಕನಿಷ್ಟ 10 ಬಯೋಡಾಟಾಗಳೊಂದಿಗೆ ಹಾಜರಾಗಬೇಕೆಂದು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ನಲ್‌ಜಲ್ ಮಿತ್ರ ಯೋಜನೆಯಡಿ ಗ್ರಾಮ ಪಂಚಾಯತಿಗಳಿಂದ ಗ್ರಾಮೀಣ ಭಾಗದ ಸ್ವ–ಸಹಾಯ ಸಂಘದ ಇಬ್ಬರು ಮಹಿಳಾ ಅಭ್ಯರ್ಥಿಗಳಿಗೆ ತರಬೇತಿಯನ್ನು ನೀಡಲು ಉದ್ದೇಶಿಸಲಾಗಿದೆ. ಅದರಂತೆ ಈಗಾಗಲೇ ಬಾಗಲಕೋಟೆಯಲ್ಲಿ ಒಂದು ತಂಡದ ತರಬೇತಿ ಪ್ರಾರಂಭವಾಗಿದ್ದು, ಮುಂದಿನ ತಂಡವನ್ನು ಹುನಗುಂದ ತಾಲೂಕಿನ ಜಿಟಿಟಿಸಿಯಲ್ಲಿ ಹಮ್ಮಿಕೊಳ್ಳಲು ಕ್ರಮವಹಿಸಲು ಕೌಶಲ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ಗುರುಪಾದಯ್ಯ ಹಿರೇಮಠ, ಜಂಟಿ ಕೈಗಾರಿಕೆ ನಿರ್ದೇಶಕ ಪ್ರಶಾಂತ ಬಾರಿಗಿಡದ, ಸರಕಾರಿ ಐಟಿಐ ಕಾಲೇಜಿನ ಪ್ರಾಚಾರ್ಯ ಎಸ್.ಎಸ್.ಹಿರೇಮಠ ಸೇರಿದಂತೆ ಇತರೆ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಇಂಡಿಯಾ ಸ್ಕಿಲ್ ಕಾಂಪಿಟೇಷನ್

ಜಿಲ್ಲೆಯ ನಿರುದ್ಯೋಗ ಯುವಕ ಯುವತಿಯರು ಉದ್ಯೋಗ ಮೇಳದಲ್ಲಿ ಭಾಗವಹಿಸಿ, ಇದರ ಸದುಪಯೋಗ ಪಡಿಸಿಕೊಳ್ಳಬೇಕು. ವಿಶ್ವ ಕೌಶಲ್ಯ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ವಿಶ್ವ ಕೌಶಲ್ಯ ಸ್ಪರ್ಧೆಯನ್ನು ಪ್ರತಿ 2 ವರ್ಷಗಳಿಗೊಮ್ಮೆ ಆಯೋಜಿಸಲಾಗುತ್ತಿದ್ದು, 2026ನೇ ಸಾಲಿನ ಕೌಶಲ್ಯ ಸ್ಪರ್ಧೆಯು ಚೀನಾದ ಶ್ಯಾಂಘೈನಲ್ಲಿ ನಡೆಯಲಿದೆ. ಈ ಸ್ಪರ್ಧೆಯಲ್ಲಿ ಭಾಗವಹಿಸಲು ಸೆಪ್ಟೆಂಬರ 30 ಕೊನೆಯ ದಿನವಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ www.skillindiadigital.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಜಿಲ್ಲಾ ಮಟ್ಟದ ಮ್ಯಾರಾಥಾನ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ

ಗದಗ: ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕರ್ನಾಟಕ ರಾಜ್ಯ ಏಡ್ಸ್ ಪ್ರೀವೇನ್‌ಷನ್ ಸೋಸೈಟಿ ಬೆಂಗಳೂರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಐ.ಎಮ್.ಎ, ರೋಟರಿ ಸೆಂಟ್ರಲ್ ಗದಗ, ಲಾಯನ್ಸ್ ಕ್ಲಬ್ ಗದಗ–ಬೆಟಗೇರಿ, ಶಿಕ್ಷಣ ಇಲಾಖೆ, ಕ್ರೀಡಾ ಇಲಾಖೆ, ರಕ್ಷಣೆ ಸಂಸ್ಥೆ, ಸೃಷ್ಟಿ ಸಂಕುಲ ಸಂಸ್ಥೆ, ಚೈತನ್ಯ ಸಂಸ್ಥೆ, ನವಚೇತನ ಸಂಸ್ಥೆ, ಗದಗ ಜಿಲ್ಲೆಯ ಎನ್. ಎಸ್.ಎಸ್. ಘಟಕಗಳು ಹಾಗೂ ರೆಡ್ ರಿಬ್ಬನ್ ಕ್ಲಬ್‌ಗಳ ಸಂಯುಕ್ತ ಆಶ್ರಯದಲ್ಲಿ ಮ್ಯಾರಾಥಾನ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.

ನಗರದ ಕೆ.ಎಚ್.ಪಾಟೀಲ್ ಜಿಲ್ಲಾ ಕ್ರೀಡಾಂಗಣದಲ್ಲಿ ಬುಧವಾರ ಮ್ಯಾರಾಥಾನ ಸ್ಪರ್ಧೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಉದ್ಘಾಟಿಸಿದರು. ನಂತರ ಅವರು ಮಾತನಾಡಿ ಹೆಚ್.ಐ.ವಿ/ಏಡ್ಸ್ ತಡೆಗಟ್ಟಲು ತೀವ್ರತರವಾದ ಐ.ಇ.ಸಿ ಪ್ರಚಾರಾಂದೋಲನ–2025 ರ ಅಂಗವಾಗಿ ರೆಡ್ ರಿಬ್ಬನ್ ಕಾಲೇಜು ವಿದ್ಯಾರ್ಥಿಗಳಿಗಾಗಿ 5 ಕಿ.ಮೀ. ಮ್ಯಾರಾಥಾನ ಸ್ಪರ್ಧೆಯನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಹೆಚ್.ಐ.ವಿ. ಪ್ರಮಾಣ ಇಳಿಮುಖವಾಗಿದ್ದು, ವಿದ್ಯಾರ್ಥಿಗಳು ಹೆಚ್.ಐ.ವಿ.ಏಡ್ಸ್ ಬಗ್ಗೆ ಮಾಹಿತಿ ತಿಳಿದುಕೊಂಡು ಸಮುದಾಯದಲ್ಲಿ ಜಾಗೃತಿ ಮೂಡಿಸಬೇಕೆಂದು ಹೇಳಿದರು. ತೀವ್ರತರವಾದ ಐ.ಇ.ಸಿ. ಪ್ರಚಾರಾಂದೋಲನದ ಘೋಷ ವಾಕ್ಯದಂತೆ "ಸುಸ್ಥಿರ ಡಿಜಿಟಲ್ ಅಭಿವೃದ್ಧಿಗಾಗಿ ಸ್ಥಳೀಯ ಯುವಜನತೆಯ ಪಾತ್ರ ಹಾಗೂ ಗುರಿಗಳು" ಘೋಷಣೆಯಂತೆ ಯುವಕರು ಸಂಯಮದಿಂದ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಸಧೃಢ ಆರೋಗ್ಯವನ್ನು ಹೊಂದಿ ಸಮೃದ್ಧ ಭಾರತವನ್ನು ನಿರ್ಮಾಣ ಮಾಡಲು ಕೈ ಜೋಡಿಸಬೇಕೆಂದು ಕರೆ ನೀಡಿದರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಡಾ. ಆರ್.ಎನ್. ಗೋಡಬೇಲೆ ಮಾತನಾಡಿ ವಿದ್ಯಾರ್ಥಿಗಳು ಯವ್ವನದಲ್ಲಿ ತಮ್ಮ ಜೀವನವನ್ನು ಜೋಪಾನ ಮಾಡಿಕೊಂಡು ಆರೋಗ್ಯಕರ ನಡುವಳಿಕೆಗಳನ್ನು ರೂಪಿಸಿಕೊಳ್ಳಲು ಕರೆ ನೀಡಿದರು. ಡಾ. ಅರುಂಧತಿ ಕುಲಕರ್ಣಿರವರು ಮಾತನಾಡಿ ಹೆಚ್.ಐ.ವಿ. ಸೋಂಕಿನ ಪ್ರಮಾಣ ಇಳಿಮುಖವಾಗಿದ್ದು, ಜಿಲ್ಲೆಯ ಯುವ ಸಮುದಾಯ ಜಾಗೃತಿಯನ್ನು ಮೂಡಿಸಿ ಜಿಲ್ಲೆಯಲ್ಲಿ ಸೋಂಕಿನ ಪ್ರಮಾಣವನ್ನು ಸೊನ್ನೆಗೆ ತರಲು ಶ್ರಮಿಸಬೇಕೆಂದು ತಿಳಿಸಿದರು ಮ್ಯಾರಾಥಾನ ನಡೆಸುವ ಉದ್ದೇಶ ಹೆಚ್.ಏಡ್ಸ್. ಬಗ್ಗೆ ಅರಿವು, ಸೇವಾ ಸೌಲಭ್ಯಗಳ ಮಾಹಿತಿ, ಕಳಂಕ ಮತ್ತು ತಾರತಮ್ಯವನ್ನು ತಡೆಗಟ್ಟುವುದು, ಹೆಚ್.ಐ.ವಿ.ಏಡ್ಸ ತಡೆ ಕಾಯ್ದೆ–2017, ನ್ಯಾಕೋ ಏಡ್ಸ್ ಆಯಪ್, ಉಚಿತ ಸಹಾಯವಾಣಿ 1097, ಎಸ್,ಟಿ.ಐ. ಖಾಯಿಲೆಗಳು ಇತಾದಿ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವುದು ಈ ಸ್ಪರ್ಧೆಯ ಉದ್ದೇಶ ಎಂದು ಹೇಳಿದರು.

ಕ್ರೀಡಾ ಇಲಾಖೆ ತರಬೇತಿದಾರರಾದ ಮಂಜುನಾಥ ಬಾಗಡೆ, ಶ್ರೀಮತಿ ವಿದ್ಯಾ ಕುಲಕರ್ಣಿ, ಗದಗ ತಾಲೂಕಿನ ಆರೋಗ್ಯ ನೀರಿಕ್ಷಣಾಧಿಕಾರಿಗಳ ಸಂಘದ ಪದಾಧಿಕಾರಿಗಳು, ಜಿಲ್ಲೆಯ ರೆಡ್ ರಿಬ್ಬನ್ ಹಾಗೂ ಎನ್.ಎಸ್. ಎಸ್. ಅಧಿಕಾರಿಗಳು, ಆರೋಗ್ಯ ಇಲಾಖೆಯ ರೂಪಸೇನ್ ಚೌವ್ಹಾಣ, ಸಿದ್ದಪ್ಪ ಲಿಂಗದಾಳ, ಬಸವರಾಜ ಹಿರೇಹಾಳ, ಗುರುರಾಜ ಕೋಟ್ಯಾಳ, ಗಣೇಶ ಬಾಗಡೆ, ಪ್ರವೀಣ ರಾಮಗಿರಿ, ಜಿಲ್ಲೆಯ ಎಲ್ಲ ಐಸಿಟಿಸಿ, ಎ.ಆರ್.ಟಿ. ಡ್ಯಾಪ್ಕೂ ಸಿಬ್ಬಂದಿ, ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗ, ಶಿಕ್ಷಣ ಇಲಾಖೆಯ ಸಿಬ್ಬಂದಿ, ರಕ್ಷಣೆ ಸಂಸ್ಥೆಯ ಹಜರತ್‌ಬಿ, ಸಿಬ್ಬಂದಿ, ಚೈತನ್ಯ ಸಂಸ್ಥೆಯ ಸುನೀಲ್, ಸಿಬ್ಬಂದಿ, ನವಚೇತನ ಸಂಸ್ಥೆಯ ಭಾರತಿ ಹಾಗೂ ಎಲ್ಲ ಸಿಬ್ಬಂದಿ ಹಾಜರಿದ್ದರು.

ರೇವಕ್ಕ ಹತ್ತಿಗೆ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ

ಬೆಳಗಾವಿ: ತಾಲೂಕಿನ ಕಡೋಲಿ ಗ್ರಾಮದ ಸರಕಾರಿ ಮಾದರಿ ಮರಾಠಿ ಶಾಲೆಯ ಕನ್ನಡ ಭಾಷಾ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿರುವ ರೇವಕ್ಕ ಗಂಗಪ್ಪ ಹತ್ತಿ ಇವರಿಗೆ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ ಪ್ರದಾನ ಮಾಡಲಾಯಿತು. ಬೆಳಗಾವಿಯ ಕುಮಾರ ಗಂಧರ್ವ ಸಭಾಭವನದಲ್ಲಿ ಆಯೋಜಿಸಲಾದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಬೆಳಗಾವಿ ಮತ್ತು ಶಾಲಾ ಶಿಕ್ಷಣ ಇಲಾಖೆ ವತಿಯಿಂದ 2025 ನೇ ಸಾಲಿನ ಜಿಲ್ಲಾಮಟ್ಟದ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿಯನ್ನು ರೇವಕ್ಕ ಗಂಗಪ್ಪ ಹತ್ತಿ ಇವರಿಗೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿಯವರು ಪ್ರಶಸ್ತಿ ಪ್ರದಾನ ಮಾಡಿ, ಗೌರವಿಸಿದರು. ರೇವಕ್ಕ ಹಕ್ಕಿಯವರು ಮರಾಠಿ ಶಾಲೆಯಲ್ಲಿ ಕನ್ನಡ ಶಿಕ್ಷಕಿಯಾಗಿ ಕಳೆದ 25 ವರ್ಷಗಳಿಂದ ಕನ್ನಡ ನಾಡು ನುಡಿ, ಸಂಸ್ಕೃತಿಯ ಕುರಿತು ಮಕ್ಕಳಲ್ಲಿ ಅರಿವು ಮೂಡಿಸಿ ಕನ್ನಡವನ್ನು ಜಾಗೃತಗೊಳಿಸಿ ಗಡಿ ಭಾಗದ ಶಾಲೆಯಲ್ಲಿ ಕನ್ನಡವನ್ನು ಬೆಳೆಸುವಲ್ಲಿ ಶ್ರಮಿಸಿದ್ದಾರೆ. ಅವರ ಸುದೀರ್ಘ ಕ್ರೀಯಾಶೀಲ ಸೇವೆ ಪರಿಗಣಿಸಿ ಜಿಲ್ಲಾಮಟ್ಟದ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ ನೀಡಿ ಗೌರವಿಸಿದೆ.

ಸಾಹಿತಿ, ಕಲಾವಿದರ ಗಮನಕ್ಕೆ

ಗದಗ: ಮಾನ್ಯ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಅವರ ಸುತ್ತೋಲೆಯಂತೆ ಮಾಸಾಶನ ಹಾಗೂ ವಿಧವಾ ಮಾಸಾಶನ ಪಡೆಯುತ್ತಿರುವ ಸಾಹಿತಿ/ಕಲಾವಿದರು ಪ್ರತಿ 6 ತಿಂಗಳಿಗೊಮ್ಮೆ ಜೀವಿತಾವಧಿ ಪ್ರಮಾಣ ಪತ್ರವನ್ನು ಸಲ್ಲಿಸುವಂತೆ ಸೂಚನೆ ಇರುತ್ತದೆ.ಗದಗ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಮಾಸಾಶನ ಪಡೆಯುತ್ತಿರುವ ಸಾಹಿತಿ/ಕಲಾವಿದರು ದಿ:30.10.2025 ರೊಳಗಾಗಿ ಜೀವಿತಾವಧಿ ಪ್ರಮಾಣ ಪತ್ರದೊಂದಿಗೆ, ಆಧಾರ ಕಾರ್ಡ, ಆದಾಯ ಮತ್ತು ಜಾತಿ ಪ್ರಮಾಣ ಪತ್ರ, ಬ್ಯಾಂಕ್ ಪಾಸ್‌ಬುಕ್ ಪ್ರತಿಯನ್ನು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೊಠಡಿ ಸಂಖ್ಯೆ:103 ಜಿಲ್ಲಾಡಳಿತ ಭವನ

ಖುದ್ದಾಗಿ ತೆರಳಿ ಕಾಮಗಾರಿಗಳ ಪ್ರಗತಿ ಪರಿಶೀಲಿಸಿದ ಸಚಿವೆ ಹೆಬ್ಬಾಳಕರ್

ಬೆಳಗಾವಿ: ಬೆಳಗಾವಿ ಗ್ರಾಮೀಣ ವಿಧಾನ ಸಭಾ ಕ್ಷೇತ್ರದಲ್ಲಿ ನಿರಂತರ ಅಭಿವೃದ್ಧಿ ಕಾಮಗಾರಿಗಳನ್ನು ನಡೆಸುವ ಮೂಲಕ ಹೆಸರಾಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಬುಧವಾರ ಬೆಳ್ಳಂ ಬೆಳಗ್ಗೆ ತಾವೇ ಕುದ್ದಾಗಿ ವಿವಿಧೆಡೆ ತೆರಳಿ ಅಭಿವೃದ್ಧಿ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದರು.

ಮೊದಲಿಗೆ, ಗಣೇಶಪುರ ಗ್ರಾಮದಲ್ಲಿ ಸುಮಾರು 2.10 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗಿರುವ ಉದ್ಯಾನವನಗಳ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು. ಸರಸ್ವತಿ ನಗರದ ಶ್ರೀ ಸಿದ್ಧಿ ವಿನಾಯಕ ದೇವಾಲಯ ಆವರಣದಲ್ಲಿ ನಡೆಯುತ್ತಿರುವ ಉದ್ಯಾನವನ ಕಾಮಗಾರಿಯನ್ನು ವೀಕ್ಷಿಸಿ ಗುತ್ತಿಗೆದಾರರಿಗೆ ಸಲಹೆ, ಸೂಚನೆ ಸೂಚನೆ ನೀಡಿದರು. ಫ್ರೀಡಂ ಫೈಟರ್ಸ್ ಕಾಲೋನಿ ಹಾಗೂ ಇನ್ನುಳಿದ ಎರಡು ಉದ್ಯಾನವನಗಳಲ್ಲಿಯೂ ಕಾಮಗಾರಿಯ ಪ್ರಗತಿಯನ್ನು ಪರಿಶೀಲಿಸಿದರು. ತದನಂತರ ಪ್ರೆಸ್ ಕಾಲೋನಿಯ ಉದ್ಯಾನವನ

ವೀಕ್ಷಿಸಿ, ಅಲ್ಲಿನ ನಾಗರಿಕರಿಗಾಗಿ ಹಸಿರಿನಿಂದ ಕೂಡಿದ ಸುಂದರ ಉದ್ಯಾನವನ ನಿರ್ಮಾಣ ಮಾಡುವಂತೆ ಸಚಿವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಂತರ ಹಿಂಡಲಗಾ ಗ್ರಾಮದಲ್ಲಿ 2.15 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾದ ವಿವಿಧ ಉದ್ಯಾನವನಗಳ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು. ಗ್ರಾಮದಲ್ಲಿನ ಮರಾಠಾ ಕಾಲೋನಿ, ವಿನಾಯಕ ನಗರ, ವಿದ್ಯಾನಗರ ಹೌಸಿಂಗ್ ಕಾಲೋನಿ, ಎಂ.ಇ.ಎಸ್. ಕಾಲೋನಿ, ಡಿಫೇನ್ಸ್ ಕಾಲೋನಿ (ಸಿದ್ಧಿ ವಿನಾಯಕ ಹೌಸಿಂಗ್ ಸೊಸೈಟಿ) ಈ ಎಲ್ಲ ಪ್ರದೇಶಗಳಲ್ಲಿ ನಡೆಯುತ್ತಿರುವ ಉದ್ಯಾನವನಗಳ ಕಾಮಗಾರಿಗಳನ್ನು ವೀಕ್ಷಿಸಿ, ಸಂಬಂಧಪಟ್ಟವರಿಂದ ಸಂಪೂರ್ಣ ಮಾಹಿತಿ ಪಡೆದರು. ಸಂಬಂಧಪಟ್ಟವರಿಗೆ ಸೂಕ್ತ ಸಲಹೆ, ಸೂಚನೆಗಳನ್ನು ನೀಡಿದರು.

ಇದಾದ ನಂತರ, ಸಹ್ಯಾದ್ರಿ ನಗರದ ಸಮಗ್ರ ಅಭಿವೃದ್ಧಿಯ ನಿಟ್ಟಿನಲ್ಲಿ 6.14 ಕೋಟಿ ರೂ. ಅನುದಾನದಲ್ಲಿ ನಡೆಯುತ್ತಿರುವ ವಿವಿಧ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು. ಸಹ್ಯಾದ್ರಿ ನಗರದ ನಡೆಯುತ್ತಿರುವ ರಸ್ತೆ ನಿರ್ಮಾಣ, ಚರಂಡಿ ಕಾಮಗಾರಿ ಹಾಗೂ ಪೇವರ್ಸ್ ಅಳವಡಿಕೆ ಕಾರ್ಯಗಳ ಪ್ರಗತಿ ಪರಿಶೀಲನೆ ನಡೆಸಿ ಸಂಪೂರ್ಣ ಮಾಹಿತಿ ಪಡೆದರು. ಇದೇ ವೇಳೆ ಮಹಾಬಳೇಶ್ವರ ದೇವಾಲಯದ ಜೀರ್ಣೋದ್ಧಾರ ಹಾಗೂ ಉದ್ಯಾನವನ ಅಭಿವೃದ್ಧಿ ಕಾಮಗಾರಿಗಳನ್ನು ಸಹ ವೀಕ್ಷಿಸಿದರು. ನಂತರ ಡಾ. ಬಿ.ಆರ್. ಅಂಬೇಡ್ಕರ್ ಭವನ ಆವರಣದಲ್ಲಿ ನಡೆಯುತ್ತಿರುವ ಉದ್ಯಾನವನ ಅಭಿವೃದ್ಧಿ ಕಾಮಗಾರಿಯ ಪ್ರಗತಿ ಪರಿಶೀಲನೆಯನ್ನು ನಡೆಸಿದರು. ಸಚಿವರೇ ಸ್ವತಃ ಸ್ಥಳಕ್ಕೆ ಆಗಮಿಸಿ ಕಾಮಗಾರಿಗಳ ಪ್ರಗತಿ ಪರಿಶೀಲಿಸುತ್ತಿರುವುದನ್ನು ಕಂಡು ನಾಗರಿಕರು ಆಶ್ಚರ್ಯಚಕಿತರಾದರು.

ಇಂದು ವಿವಿಧಡೆ ವಿದ್ಯುತ್ ವ್ಯತ್ಯಯ

ಕೊಪ್ಪಳ: 110/11 ಕೆವಿ ಬೆಟಗೇರಿ ಸ್ಟೇಷನ್ ಮತ್ತು 33 ಕೆವಿ ಅಳವಂಡಿ ಸ್ಟೇಷನ್‌ನ ದ್ವಿತೀಯ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ನಡೆಯುತ್ತಿರುವ ಪ್ರಯುಕ್ತ ಸೆಪ್ಟೆಂಬರ್ 12ರಂದು ವಿವಿಧ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. 110/11 ಕೆ.ವಿ ಬೆಟಗೇರಿ ಸ್ಟೇಷನ್‌ಗೆ ಒಳಪಡುವ ಎಫ್-1 ಮೋರನಾಳ, ಎಫ್-2 ಬೋಚನಹಳ್ಳಿ, ಎಫ್-3 ಹನಕುಂಟಿ, ಎಫ್-4 ಬೆಟಗೇರಿ ನಗರ ಎನ್.ಜೆ.ವೈ(ವಾಟರ್ ಸಪ್ಲೈ), ಎಫ್-5 ತಿಗರಿ, ಎಫ್-6 ಬೆಟಗೇರಿ ಎನ್.ಜೆ.ವೈ, ಎಫ್-7 ನೀರಲಗಿ, ಎಫ್-8 ಕಾತರಕಿ, ಎಫ್-9 ಡಂಬ್ರಳ್ಳಿ, ಎಫ್-10 ಮತ್ತೂರ, ಎಫ್-11 ಬಿಸರಳ್ಳಿ ಫೀಡರ್ ಮತ್ತು 33 ಕೆ.ವಿ ಆಳವಂಡಿ ಸ್ಟೇಷನ್‌ಗೆ ಒಳಪಡುವ ಎಫ್-1 ಬೈರಾಪೂರ, ಎಫ್-2 ಅಳವಂಡಿ, ಎಫ್-3 ಹಲವಾಗಲಿ, ಎಫ್-4 ಬೆಳಗಟ್ಟಿ, ಎಫ್-5 ಕವಲೂರ ಮತ್ತು ಎಫ್-6 ಹೈದರನಗರ ಈ ಎಲ್ಲಾ ಫೀಡರಗಳ ಮಾರ್ಗಗಳಲ್ಲಿ ಸೆ. 12ರಂದು ಬೆಳಿಗ್ಗೆ 10 ರಿಂದ ಸಾಯಂಕಾಲ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸಬೇಕು. ವಿದ್ಯುತ್ ನಿರ್ವಹಣಾ ಕೆಲಸವು ಬೇಗನೆ ಮುಕ್ತಾಯಗೊಂಡಲ್ಲಿ, ಯಾವುದೇ ಸಮಯದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುವುದು. ಆದ್ದರಿಂದ ಸಾರ್ವಜನಿಕರು ಯಾವುದೇ ತರಹದ ವಿದ್ಯುತ್ ದುರಸ್ಥಿ ಕೆಲಸ-ಕಾರ್ಯಗಳನ್ನು ಮಾಡಬಾರದೆಂದು ಈ ಮೂಲಕ ಕೋರಲಾಗಿದೆ. ಒಂದು ವೇಳೆ ವಿದ್ಯುತ್ ಅಪಘಾತ ಸಂಭವಿಸಿದಲ್ಲಿ ಕಂಪನಿಯು ಜವಾಬ್ದಾರರಾಗಿರುವುದಿಲ್ಲ ಎಂದು ಜೆಸ್ಕಾಂ ಕೊಪ್ಪಳ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿವಿಧ ಇಲಾಖೆಗಳ ಸಹಯೋಗದಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಕಾರ್ಯಕ್ರಮ

ಜೀವನದಲ್ಲಿ ಆತ್ಮವಿಶ್ವಾಸದಿಂದ ಧೈರ್ಯವಾಗಿ ಬದುಕಬೇಕು

ಹಾವೇರಿ: ಜೀವನದಲ್ಲಿ ಧೈರ್ಯ ಕಳೆದುಕೊಳ್ಳಲು ಹಲವಾರು ಕಾರಣಗಳಿದ್ದು, ಅವೆಲ್ಲವನ್ನು ಮೆಟ್ಟಿನಿಂತು, ಆತ್ಮವಿಶ್ವಾಸದಿಂದ ಬದಕಲು ಕಲಿಯಬೇಕು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಪಿ ಆರ್ ಹಾವನೂರು ಹೇಳಿದರು.

ನಗರದ ಶ್ರೀ ಶಿವಲಿಂಗೇಶ್ವರ ಮಹಿಳಾ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಬುಧವಾರ ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಆತ್ಮ ಹತ್ಯೆ ತಡೆಗಟ್ಟುವ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜೀವನದಲ್ಲಿ ಕಷ್ಟ-ಸುಖ, ಸೋಲು-ಗೆಲವು ಸಾಮಾನ್ಯ. ಸೋತಾಗ ಕುಗ್ಗದೆ, ಗೆದ್ದಾಗ ಹಿಗ್ಗದೆ, ಎಲ್ಲವನ್ನು ಸಮನಾಗಿ ಸ್ವೀಕರಿಸಿ ಮುನ್ನಡೆಯಬೇಕು. ಪ್ರತಿಯೊಬ್ಬರು ಆತ್ಮವಿಶ್ವಾಸದಿಂದ ಬದಕುಲು ಕಲಿಯಬೇಕು , ಆಗ ಮಾತ್ರ ಜೀವನದಲ್ಲಿ ನೆಮ್ಮದಿಯಿಂದಿರಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಪಾಲಕರು ಮತ್ತು ಮಕ್ಕಳ ನಡುವೆ ಉತ್ತಮ ಬಾಂಧವ್ಯ ಇರಬೇಕು. ಪಾಲಕರು ತಮ್ಮ ಮಕ್ಕಳನ್ನು ಸರಿಯಾಗಿ ಅರ್ಥ ಮಾಡಿಕೊಳ್ಳಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದು ಪ್ರತಿಯೊಬ್ಬ ಪಾಲಕರ ಕರ್ತವ್ಯವಾಗಿದೆ. ಮಕ್ಕಳ ಕಲಿಕೆಗೆ ಹೆಚ್ಚು ಪ್ರೋತ್ಸಾಹ ನೀಡಿ, ಮಕ್ಕಳನ್ನು ಶಾಲೆಗಳಲ್ಲಿ ಪಡೆಯುವ ಅಂಕಗಳ ಆಧಾರದ ಮೇಲೆ

ಅಳೆಯಬೇಡಿ ಮತ್ತು ಹೆಚ್ಚು ಅಕಗಳನ್ನು ಪಡೆಯುವಂತೆ ಒತ್ತಡ ಹೇರಿ ಮಕ್ಕಳ ಮನಸ್ಸಿನಲ್ಲಿ ಆತಂಕ ಮೂಡಿಸಬೇಡಿ. ಅವರುಗಳಿಗೆ ಶಿಕ್ಷಣದ ಮಹತ್ವದ ಕುರಿತು ಅರಿವು ಮೂಡಿಸಬೇಕು ಎಂದರು.

ತಮ್ಮ ನೋವುಗಳನ್ನು ಹತ್ತಿರದ ವ್ಯಕ್ತಿಗಳಲ್ಲಿ ಹಂಚಿಕೊಂಡು ಮನಸ್ಸು ಹಗುರಮಾಡಿಕೊಳ್ಳಬೇಕು. ಕಷ್ಟಗಳನ್ನು ಮನಸ್ಸಿನಲ್ಲಿ ಇಟ್ಟುಕೊಂಡು ಮಾನಸಿಕವಾಗಿ ಕೊರಗಬಾರದು. ನಮ್ಮ ಸುತ್ತಮುತ್ತ ಯಾರಾದರೂ ಮಾನಸಿಕವಾಗಿ ಬಳಲುತ್ತಿದ್ದರೆ, ಅವರನ್ನು ಮಾನಸಿಕ ಆರೋಗ್ಯ ಕೇಂದ್ರಕ್ಕೆ ಸೇರಿಸಿ ಮಾನವೀಯತೆ ಮೆರೆಯುವುದು ಪ್ರತಿಯೊಬ್ಬ ಪ್ರಜೆಯ ಕರ್ತವ್ಯವಾಗಿದೆ ಎಂದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗದ ವೈದ್ಯರಾದ ಡಾ.ಶೃತಿ ಎ. ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ. ಚನ್ನಬಸಯ್ಯ ವಿರಕ್ತಮಠ ಅವರು ಆತ್ಮ ಹತ್ಯೆಯ ತಡೆಗಟ್ಟುವ ಕುರಿತು ವಿಶೇಷ ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಆತ್ಮಹತ್ಯೆ ತಡೆಗಟ್ಟುವ ಕುರಿತು ಭಿತ್ತಿಪತ್ರ ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಧಿಕಾರಿ ಡಾ. ಸರಿತಾ, ತಾಲೂಕ ಆರೋಗ್ಯಧಿಕಾರಿ ಡಾ. ಪ್ರಭಾಕರ್ ಕುಂದೂರು, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಉಮೇಶ್ ಕರಮುಡಿ, ಪ್ರಾಚಾರ್ಯರಾದ ರವಿ ಸಿ ವಿ ಹಾಗೂ ಇತರರು ಉಪಸ್ಥಿತರಿದ್ದರು.

ರೈತರಿಗೆ 5.93 ಕೋಟಿ ರೂ. ಸಾಲ ವಿತರಣೆ

ಮುದ್ದೇಬಿಹಾಳ: ಸಹಕಾರಿ ಬ್ಯಾಂಕ್ ಅಭಿವೃದ್ಧಿಯಾಗಬೇಕಾದರೆ ಬ್ಯಾಂಕ್ ಷೇರುದಾರರು ಸಾಲ ತೆಗೆದುಕೊಂಡು ಆ ಸಾಲವನ್ನು ಸರಿಯಾದ ಸಮಯಕ್ಕೆ ತುಂಬಿದರೆ ಸಹಕಾರಿ ಬ್ಯಾಂಕ್ ಬೆಳವಣಿಗೆ ಯಾಗುತ್ತದೆ.ಅದೇ ರೀತಿಯ ರೈತರಿಗೆ ಸಾಲವನ್ನು ನೀಡಲು ಅನುಕೂಲವಾಗುತ್ತದೆ.

ಈ ವಾರ್ಷಿಕ ವರ್ಷದಲ್ಲಿ ಸುಮಾರು 593.98 ಲಕ್ಷ ಹಣವನ್ನು ಅಲ್ಪಾವಧಿ, ಕೃಷಿ ಮಧ್ಯಮಾವಧಿ ಹಾಗೂ ಟ್ರಾಕ್ಟರ್ ಖರೀದಿಗಾಗಿ ಸಾಲವನ್ನು ಕೊಡಲಾಗಿದೆ ಎಂದು ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಅಧ್ಯಕ್ಷ ಶ್ರೀಶೈಲ ಮರೋಳ ಹೇಳಿದರು.

ಮುದ್ದೇಬಿಹಾಳ ತಾಲ್ಲೂಕಿನ ತಂಗಡಗಿ ಗ್ರಾಮದಲ್ಲಿ ಬುಧವಾರ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ 77ನೇ ವಾರ್ಷಿಕ ಸರ್ವ ಸಾಧಾರಣ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರೈತರೇ ಸಂಘದ ಬೆನ್ನುಲುಬಾಗಿದ್ದು ಈ ವರ್ಷದಲ್ಲಿ 10.17 ಲಕ್ಷ ಲಾಭ ಗಳಿಕೆಯಾಗಿದ್ದು 121.75 ಲಕ್ಷ ಷೇರು ಬಂಡವಾಳವನ್ನು ಹೊಂದಿ ಸಾಲ ವಸೂಲಾತಿ ನೂರಕ್ಕೆ ನೂರರಷ್ಟು ಗುರಿ ಸಾಧಿಸಿದೆ ಎಂದು ಸಭೆಯಲ್ಲಿ ಹೇಳಿದರು.

ಸಂಘದ ಹಿರಿಯ ಸದಸ್ಯ ಸಹಕಾರಿ ಧುರೀಣ ಬಸವರಾಜ ಇಸ್ಲಾಂಪುರ ಮಾತನಾಡಿ, ರೈತರು ಸಹಕಾರಿ ಸಂಘದಲ್ಲಿ ವಿಶ್ವಾಸವಿರಿಸಿ ಸಹಕರಿಸಿದ್ದು ರೈತರು ಹೆಚ್ಚು ಹಣವನ್ನು ಸಂಘದಲ್ಲಿ ಠೇವಣಿ ಇಡುವಂತೆ ರೈತರಿಗೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿ. ಎಸ್. ಬಡದಾನಿ, ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಉಪಾಧ್ಯಕ್ಷ ಮಲೀಕಸಾಬ ನದಾಫ್, ಸದಸ್ಯರಾದ ಮಾಂತೇಶ ಹೊಳಿ, ಸಂಗಯ್ಯ ಸಾರಂಗಮಠ, ಗುರನಗೌಡ ಕರಿಬಂಟನಾಳ, ಹೊಳಿ, ನಿಜಗುಣಪ್ಪ ವಾಲಿಕಾರ, ಜಯಶ್ರೀ ಮೇಟಿ, ಸುನಂದಾ ನಿಡಗುಂದಿ, ಮಾಂತೇಶ ಛಲವಾದಿ, ವೃತ್ತಿಪರ ನಿರ್ದೇಶಕರಾದ ದರಿಯಪ್ಪ ದೇಸಣಗಿ,ಸಂಘದ ಮುಖ್ಯ ಸಂಗಣ್ಣ ನಿಡಗುಂದಿ, ಕ್ಲರ್ಕ್ ಬಸವರಾಜ ಲಿಂಗದಳ್ಳಿ, ಮುಖಂಡರಾದ ರಾಜೂಗೌಡ ಕೊಂಗಿ,ಜಿ. ಜಿ. ಮೋಟಗಿ,ಬಸವರಾಜ್ ತಾಳಿಕೋಟಿ, ರಾಜುಧಣಿ ದೇಶಮುಖ, ಶಂಕ್ರಪ್ಪ ಹೊಳಿ, ಸಂಗಣ್ಣ ದೇವರಮನಿ, ಶಿವಾನಂದ್ ಮಂಕಣಿ,ಸಂಗಣ್ಣ ಕವಡಿಮಟ್ಟಿ, ರಾಮಣ್ಣ ಕುಂಟೋಜಿ, ಕೆಂಚಪ್ಪ ಲಕ್ಕಣ್ಣವರು,ಪರಪ್ಪ ಹೊಳಿ, ಗಂಗೂರ, ಕುಂಚಗನೂರ, ಕಮಲದಿನ್ನಿ, "ಅಮರಗೋಳ ಹಾಗೂ ತಂಗಡಗಿ ಗ್ರಾಮದ ಬ್ಯಾಂಕ್ ನ ಶೇರುದಾರರು, ರಮೇಶ್ ಲಿಂಗದಳ್ಳಿ ನಿರೂಪಿಸಿ ವಂದಿಸಿದರು.

ನಾಳೆ ವಿದ್ಯುತ್ ವ್ಯತ್ಯಯ

ಬಾಗಲಕೋಟೆ: ಜಿಲ್ಲೆಯ ಬಾಗಲಕೋಟೆ, ಬಾದಾಮಿ, ಗುಳೇದಗುಡ್ಡ ಹಾಗೂ ಹುನಗುಂದ ತಾಲೂಕು ವ್ಯಾಪ್ತಿಯ 11 ಕೆವಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ 2ನೇ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ಕೈಗೊಳ್ಳುವ ಪ್ರಯುಕ್ತ ಸೆಪ್ಟೆಂಬರ 13 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆವರೆಗೆ ವಿದ್ಯುತ್ ಸರಬರಾಜುವಿನಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಬಾಗಲಕೋಟೆ ಹೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

110 ಕೆವಿ ಬಾಗಲಕೋಟೆ ವಿದ್ಯುತ್ ವಿತರಣಾ ಕೇಂದ್ರ, 110 ಕೆವಿ ನವನಗರ, ಕೇಂದ್ರ, 110 ಕೆವಿ ನವನಗರ-1 ಯುನಿಟ್-2, 110 ಕೆವಿ ನವನಗರ 2 ಯುನಿಟ್-2, 110 ಕೆವಿ ಬಾದಾಮಿ, 110 ಕೆವಿ ಹೆಬ್ಬಳ್ಳಿ, 110 ಕೆವಿ ಗುಳೇದಗುಡ್ಡ, 110 ಕೆವಿ ನಾಗರಾಳ ಎಸ್.ಸಿ, 110 ಕೆವಿ ಬೆನಕಟ್ಟಿ, 110 ಕೆವಿ ಶೀಗಿಕೇರಿ, 110 ಕೆವಿ ನೀರಬೂದಿಹಾಳ, 110 ಕೆವಿ ಕಲಾದಗಿ, 110 ಕೆವಿ ಊದಗಟ್ಟಿ, ಶಾರದಾಳ, 110 ಕೆವಿ ಕುಳಗೇರಿ ಕ್ರಾಸ್, 110 ಕೆವಿ ಕೈನಕಟ್ಟಿ, 110 ಕೆವಿ ನಾಗರಾಳ, 33 ಕೆವಿ ಶಿರೂರ, 33 ಕೆವಿ ಕಮಗತಿ ಹಾಗೂ ಐಪಿಪಿ, ಇಎಚ್‌ಟಿ, ಗ್ರಾಹಕರಾದ 110 ಕೆವಿ ಬಾದಾಮಿ ಶುಗರ್ಸ, ದೊಡ್ಡಣ್ಣವರ ಎ.ಎಚ್.ಟಿ. ಮೆಲ್ ಬ್ರೊ ಶುಗರ್ಸ, ಕೇದಾರನಾಥ ಶುಗರ್ಸ, ಹೆರಕಲ್ ಎಲ್.ಐ.ಎಸ್, ಎಂ.ಎನ್. ಆರ್ ಕೇನ್ ಪ್ರೈ.ಲಿ, 33 ಕೆವಿ ಅಕೆಮಿ ಸೋಲಾರ ಐಪಿಪಿ ಮತ್ತು 33 ಕೆವಿ ಕಾಟವಾ ವಿದ್ಯುತ್ ಕೇಂದ್ರಗಳಿಂದ ಸರಬರಾಜು ಆಗುವ ಎಲ್ಲ 11 ಕೆವಿ ವಿದ್ಯುತ್ ಮಾರ್ಗಗಳ ಪೂರೈಕೆಯಲ್ಲಿ ವ್ಯತ್ಯಯವಾಗಿದೆ ಎಂದು ತಿಳಿಸಿದ್ದಾರೆ.

ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

ಹಾವೇರಿ: ಪ್ರಸಕ್ತ 2025-26ನೇ ಸಾಲಿನ ಬೆಳಗಾವಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟಗಳನ್ನು ಬೆಳಗಾವಿ, ಬಾಗಲಕೋಟೆ, ಗದಗ, ಹಾವೇರಿ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಸೆ. 11 ರಿಂದ 15ರವರೆಗೆ ಆಯೋಜಿಸಲಾಗಿದೆ.

ಹಾವೇರಿ ಜಿಲ್ಲಾ ಮಟ್ಟದಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ, ದ್ವಿತೀಯ ಸ್ಥಾನ ಮತ್ತು ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳು ಮಾತ್ರ ಭಾಗವಹಿಸಲು ಅರ್ಹರಾಗಿರುತ್ತಾರೆ. ಹಾವೇರಿ ಜಿಲ್ಲೆಯಿಂದ ಭಾಗವಹಿಸುವ ಕ್ರೀಡಾಪಟುಗಳಿಗೆ ಕೆ.ಎಸ್. ಆರ್.ಟಿ.ಸಿ ಬಸ್ಸಿನ ಪ್ರಯಾಣ ದರವನ್ನು ಮಾತ್ರ ಪಾವತಿಸಲಾಗುವುದು. ಭಾಗವಹಿಸುವ ಕ್ರೀಡಾಪಟುಗಳು ಅವರುಗಳಿಗೆ ಸಂಬಂಧಿಸಿದ ಬ್ಯಾಂಕಿನ ಪಾಸ್‌ಬುಕ್ ಜೆರಾಕ್ಸ್ ಪ್ರತಿಯನ್ನು ಮತ್ತು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಹಾಗೂ ಮೊಬೈಲ್ ಸಂಖ್ಯೆಯನ್ನು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಹಾವೇರಿ ಕಚೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕು. ಕ್ರೀಡಾಪಟುಗಳಿಗೆ ಸಂಬಂಧಿಸಿದ ಪ್ರಯಾಣಭತ್ಯೆ ಮತ್ತು ದಿನಭತ್ಯೆಯನ್ನು ಅವರ ಖಾತೆಗೆ ನೇರವಾಗಿ ಪಾವತಿಸಲಾಗುವುದು. ಹಾವೇರಿ ಜಿಲ್ಲೆಯ ಸ್ಪರ್ಧಾಳುಗಳು ಆಯಾ ನಿಗದಿತ ದಿನಾಂಕಗಳಂದು ಸಂಬಂಧಿಸಿದ ಸ್ಥಳಗಳಲ್ಲಿ ವರದಿ ಮಾಡಿಕೊಳ್ಳಲು ತಿಳಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ಈ ಕಚೇರಿಯ ದೂರವಾಣಿ ಸಂಖ್ಯೆ 08375-232443 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಕ್ರೀಡಾಕೂಟ ಸ್ಥಳಗಳು: ಸೆ.11 ರಂದು ಬೆಳಿಗ್ಗೆ 8 ಗಂಟೆಗೆ ಗದಗ ಮಹಾತ್ಮಾಗಾಂಧಿ ಹಾಕಿ ಕ್ರಿಂಡಾಂಗಣದಲ್ಲಿ ಹಾಕಿ, ಕೆ.ಎಚ್.ಪಟೇಲ್ ಕ್ರೀಡಾಂಗಣದಲ್ಲಿ ಫುಟ್‌ಬಾಲ್, ಬಾಗಲಕೋಟೆ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 9 ಗಂಟಗೆ ಯೋಗಾ, ವಿಜಯಪುರ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಜುಡೋ, ಸೆ. 11, ಸೆ.12 ರಂದು ಬೆಳಗಾವಿ ಜಿಲ್ಲೆ ರಾಯಬಾಗ ತಾ. ಹಾರೋಗೇರಿ ವಾಲ್ಮೀಕಿ ಶಿಕ್ಷಣ ಸಂಸ್ಥೆ ದೈಹಿಕ ಶಿಕ್ಷಣ ಮಹಾವಿದ್ಯಾಲಯದ ಆಟದ ಮೈದಾನದಲ್ಲಿ ಹ್ಯಾಂಡ್‌ಬಾಲ್ ಹಾಗೂ ಕಂಕಣವಾಡಿ ಗ್ರಾಮದ ಗಂಗ